ಸಂಪುಟ : 9 ಸಂಚಿಕೆ 105 ಪುಟ : 4 ಬೆಲೆ: 3.00 ಮಂಗಳವಾರ ಮೇ 28 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 105 Pages : 4 Price : 3.00 Tuesday May 28 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಮೇ 28 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಪ್ರಕಟಣೆ ತಿಳಿಸಿದೆ.

ಸ್ಥಳಗಳ ವಿವರ : ವಾರ್ಡ್ ನಂ. 1ರಲ್ಲಿ ಎಸ್. ಎಂ. ಕೃಷ್ಣ ನಗರ, ವಾರ್ಡ್ ನಂ. 22ರಲ್ಲಿ ಕನ್ನಡ ಶಾಲೆ, ದೊಡ್ಡ ಮಸೂತಿ ಭಾಗಗಳ 14 ಲೈನ್, 1600, 189 ಬಸ್ ಸ್ಟ್ಯಾಂಡ್ ಹಿಂದಿನ ಭಾಗ, ಮುಂದಿನ ಭಾಗ

ವಾರ್ಡ್ ನಂ. 10 ಮತ್ತು 6ರಲ್ಲಿ ಸಿಹಿ ನೀರಿನ ಬಾವಿ, ಕಲ್ಯಾಣಿ ಅಗಸಿ ಲೈನ್, ಕಲ್ಮನಿಯವರ್ ಲೈನ್, ಮುಳಗುಂದ ಅವರ ಪ್ಲಾಟ್, ಗಣಾಚಾರಿ ಅವರ ಲೇಔಟ್, ಮಲ್ಲಿಕಾರ್ಜುನ್ ಗುಡಿ ಕೆಲವು ಉಳಿದ ಭಾಗಗಳು,

ವಾರ್ಡ್ ನಂ. 15, 17ರಲ್ಲಿ ಶಹಾಪುರ್ ಪೇಟೆ, ಮೀನದ್ ಮಾರ್ಕೆಟ್, ಡಿಸಿ ಮಿಲ್ ರಸ್ತೆ, ಗಣಪತಿ ಗುಡಿ ಲೈನ್, ಬಸವೇಶ್ವರ ಲೈನ್ ಕೆಲವು ಉಳಿದ ಭಾಗಗಳು,

ವಾರ್ಡ್ ನಂ. 28ರಲ್ಲಿ ಪಂಚಾಕ್ಷರಿ ನಗರ 2ನೇ ಕ್ರಾಸ್, 3 ಮತ್ತು 4ನೇ ಕ್ರಾಸ್, ಗುಳೇದವರ್ ಲೈನ್, ಇಟಗಿಯವರ ಲೈನ್, ಬಿದರೂರವರ ಲೈನ್, ಟೋಪಿ ಅವರ ಲೈನ್, ಜಾಧವ್ ಅವರ ಲೈನ್, ಅಗಸರ್ ಲೈನ್, ಹುದ್ದಾರ್ ಮಾಸ್ತರ ಲೈನ್, ಮಾಲಿಪಾಟೀಲ್ ಲೈನ್, ಮುಧೋಳ್ ಅವರ್ ಲೈನ್, ಕಾರ್ಕಳವರ್ ಲೈನ್, ಜೋಪಡಿ ಅವರ್ ಲೈನ್, ಕೀರೆಸೂರ್ ಲೈನ್ ಉಳಿದ ಭಾಗಗಳು

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೊಣ್ಣೂರ ರೈತ ಸಂಪರ್ಕ ಕೇಂದ್ರ ದಾಸ್ತಾನು ವಿವರ

■ ವಿಜಯಸಾಕ್ಷಿ ಸುದ್ದಿ, ನರಗುಂದ

ವಾರದಿಂದ ಮುಂಗಾರು ಪ್ರವೇಶವಾಗಿದ್ದು, ವಾಡಿಕೆಯಂತೆ ಹೆಸರು ಬೀಜ ಬಿತ್ತನೆ ಹೆಚ್ಚಿನ ಪ್ರಮಾಣದಲ್ಲಿ ಆಗುವ ನಿರೀಕ್ಷೆಯಿದೆ. ತಾಲೂಕಿನ ಕೊಣ್ಣೂರ ಹೋಬಳಿ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರದಲ್ಲಿ ಸಮರ್ಪಕವಾಗಿ ರೈತರಿಗೆ ಬೀಜ ಒದಗಿಸಲು ಸೂಕ್ತ ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಎಂದು ಎಎಚ್‌ಓ ನವೀನ ಪಾಟೀಲ ತಿಳಿಸಿದ್ದಾರೆ.

ಈಗಾಗಲೇ 25 ಕ್ವಿಂಟಲ್ ಹೆಸರು ಬೀಜವನ್ನು ಕೆಎಸ್‌ಎಸ್‌ಸಿ ಗದಗ ಶಾಖೆಯಿಂದ ಶೇಖರಿಸಿದ್ದು, ಕಳೆದ ವರ್ಷ ಮಳೆಯ ಅಭಾವದಿಂದ 40 ಕ್ವಿಂಟಲ್ ಹೆಸರು ಬೀಜ ಮಾತ್ರ ಬಿತ್ತನೆಯಾಗಿತ್ತು. ಈ ಬಾರಿ 70–80 ಕ್ವಿಂಟಲ್ ಬಿತ್ತನೆಯಾಗುವ ನಿರೀಕ್ಷೆಯಿದೆ. ಕಳೆದ ವರ್ಷ ಪ್ರತಿ 5 ಕೆಜಿ ಹೆಸರು ಬೀಜ 435 ರೂ ದರ ನಿಗದಿಯಾಗಿತ್ತು. ಈ ಬಾರಿ ಬೀಜ ಸಂರಕ್ಷಣೆಯಲ್ಲಿ ಕೊರತೆಯಾಗಿದ್ದರಿಂದ ಪ್ರತಿ 5 ಕೆಜಿ ಬೀಜದ ದರವನ್ನು 805 ರೂ ನಿಗದಿ ಮಾಡಲಾಗಿದೆ. ಮೇ 27ರಿಂದ ಬೀಜ ವಿತರಣೆ ಪ್ರಾರಂಭವಾಗಿದ್ದು, ರೈತರು ಆಧಾರ್ ಕಾರ್ಡ್ ಝುರಾಕ್ಸ ಪ್ರತಿಯೊಂದಿಗೆ ನಿಗದಿತ ಹಣ ಪಾವತಿಸಿ ಬೀಜಗಳನ್ನು ಪಡೆಯಬಹುದು ಎಂದು ಅವರು ತಿಳಿಸಿದ್ದಾರೆ.

## ಕುಡಿಯುವ ನೀರಿನ ಸಮಸ್ಯೆ ಆಗದಂತೆ ನೋಡಿಕೊಳ್ಳಿ




■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ತಿಮ್ಮಾಪುರ ಗ್ರಾಮದಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆಯನ್ನು ಗದಗ ತಾಲೂಕಿನ ಕಾರ್ಯ ನಿರ್ವಾಹಕ ಅಧಿಕಾರಿ, ತಹಸೀಲ್ದಾರ್, ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪರಿಶೀಲಿಸಿದರು.

ಗ್ರಾಮಸ್ಥರು ಎದುರಿಸುತ್ತಿರುವ ಕುಡಿಯುವ ನೀರಿನ ಬವಣೆ ಕುರಿತು ಪತ್ರಿಕೆಯ ವರದಿ ಆಧರಿಸಿ ಅಧಿಕಾರಿಗಳ ತಂಡ ಗ್ರಾಮಕ್ಕೆ ಭೇಟಿ ನೀಡಿ ಸಮಸ್ಯೆಗೆ ಸ್ಪಂದಿಸಿದೆ.

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕ್ ರಾವ್ ಪಾಟೀಲ್ ಸ್ವತಃ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಸ್ಥಳೀಯರಿಂದ ಮಾಹಿತಿ ಪಡೆದ ಅವರು, ಪ್ರಸ್ತುತ ಕುಡಿಯುವ ನೀರನ್ನು ಪರೀಕ್ಷೆ ಮಾಡಿಯೇ ಎರೇ ಹಂಚಿನಾಳ ಗ್ರಾಮದಿಂದ ಟ್ಯಾಂಕರ್‌ಗಳ ಮೂಲಕ ಸರಬರಾಜು ಮಾಡಲಾಗುತ್ತಿದ್ದು, ಗ್ರಾಮದಲ್ಲಿ ನೀರಿನ ಹೆಚ್ಚಿನ ಬೇಡಿಕೆ ಇದ್ದಲ್ಲಿ ಹೆಚ್ಚಿನ ಟ್ಯಾಂಕರ್‌ಗಳ ಮೂಲಕ ಒದಗಿಸಲು ಖಫಖ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್‌ರವರಿಗೆ ಸೂಚಿಸಲಾಯಿತು.

ಈ ಸಂದರ್ಭದಲ್ಲಿ ತಹಸೀಲ್ದಾರ್, ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್, ಸಹಾಯಕ ನಿರ್ದೇಶಕರು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಜರಿದ್ದರು.



ರಾಜ್ಯ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯದ ಕುಲಪತಿಗಳಾದ ವಿಷ್ಣುಕಾಂತ ಚಟಪಲ್ಲಿ ಇವರ ಸೇವಾ ನಿವೃತ್ತಿ ನಿಮಿತ್ತ ಬೀಳ್ಕೊಡುಗೆ ಹಾಗೂ ಅಭಿನಂದನಾ ಸಮಾರಂಭದಲ್ಲಿ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ನಿವೃತ್ತ ಐಎಎಸ್ ಅಧಿಕಾರಿ ಅಶೋಕ ದಳವಾಯಿ, ಕುಲಸಚಿವ ಸುರೇಶ ನಾಡಗೌಡರ, ಬಿಜೆಪಿ ಜಿಲ್ಲಾ ಕಾನೂನು ಪ್ರಕೋಷ್ಠದ ಸಂಚಾಲಕ ಕೆ.ಪಿ. ಕೋಟಿಗೌಡರ, ಸಹ ಸಂಚಾಲಕರಾದ ರಮೇಶ ಸಜ್ಜಗಾರ, ಪ್ರಭಾವತಿ ಬೆಳವಣಿಕೆಮಠ, ರಮೇಶ ಹತ್ತಿಕಾಳ, ಬಸವಾ ಮುಂತಾದವರಿದ್ದರು.

### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್

# ಸ್ವಚ್ಛತೆ, ಆರೋಗ್ಯ ರಕ್ಷಣೆಗೆ ಗಮನ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಗಾರು ಮಳೆ ಆರಂಭವಾಗಿದ್ದು, ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಕಾಲುವೆ ಮತ್ತು ಚರಂಡಿಗಳ ಸ್ವಚ್ಛತೆಗೆ ಆದ್ಯತೆ ನೀಡಬೇಕು. ನೀರು ಪರೀಕ್ಷಿಸಿ ಯೋಗ್ಯವಿದ್ದಲ್ಲಿ ಮಾತ್ರವೇ ಕುಡಿಯಲು ಸರಬರಾಜು ಮಾಡಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ಸೋಮವಾರ ಏರ್ಪಡಿಸಿದ್ದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರ ಹಾಗೂ ಗ್ರಾಮೀಣ ಭಾಗದ ರಸ್ತೆಗಳ ಇಕ್ಕೆಲಗಳಲ್ಲಿ ಮತ್ತು ಚರಂಡಿಗಳಲ್ಲಿ ಪ್ಲಾಸ್ಟಿಕ್ ಸೇರಿದಂತೆ ಅನಗತ್ಯ ವಸ್ತುಗಳು ಸಂಗ್ರಹವಾಗಿ ನೀರು ಮುಂದೆ ಸಾಗದೇ ಅಲ್ಲಿನ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತದೆ. ಮಳೆ ನೀರು ಸರಾಗವಾಗಿ ಮುಂದೆ ಸಾಗುವಂತೆ ಚರಂಡಿಗಳ ಸ್ವಚ್ಛತೆಗೆ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ್ ಅಧಿಕಾರಿಗಳು ಗಮನ ಹರಿಸಬೇಕು ಎಂದರು.

ಸಾರ್ವಜನಿಕರಿಗೆ ಕುಡಿಯಲು ಪೂರೈಕೆ ಮಾಡುತ್ತಿರುವ ನೀರು ಪರೀಕ್ಷಿಸಿ, ಯೋಗ್ಯವಿದ್ದಲ್ಲಿ ಸರಬರಾಜು ಮಾಡಬೇಕು. ಅಲ್ಲದೇ ಸಾರ್ವಜನಿಕರಿಗೆ ನೀರನ್ನು ಸಾಧ್ಯವಾದಷ್ಟು ಕುದಿಸಿ ಆರಿಸಿ ಕುಡಿಯಲು ತಿಳಿಹೇಳಬೇಕು ಎಂದರು.

ಮನೆಯ ಸುತ್ತಮುತ್ತ ನೈರ್ಮಲ್ಯ ಕಾಪಾಡಿಕೊಳ್ಳಬೇಕು. ಶುದ್ಧ ಕುಡಿಯುವ ನೀರು ಬಳಕೆ ಮಾಡಬೇಕು. ಇಲ್ಲದಿದ್ದಲ್ಲಿ ಸಾಂಕ್ರಾಮಿಕ ರೋಗಗಳು ಉಲ್ಬಣಿಸಬಹುದು. ಸಾರ್ವಜನಿಕರಿಗೆ ಆರೋಗ್ಯ ಇಲಾಖೆ ಅಧಿಕಾರಿಗಳು ಸಾಂಕ್ರಾಮಿಕ ರೋಗಗಳ ಹತೋಟಿ ಕ್ರಮಗಳ ಕುರಿತು ಅರಿವು ಮೂಡಿಸುವ ಕಾರ್ಯ ಮಾಡುವಂತೆ ಸೂಚಿಸಿದರು.

ಜೂನ್ ಮೊದಲ ವಾರ ಅಧಿಕ ಮಳೆಯಾಗುವ ಸಂಭವವಿದ್ದು, ಇದರಿಂದ ಅತಿವೃಷ್ಟಿ ಎದುರಾಗುವ ಸಾಧ್ಯತೆಯಿದೆ. ಅಧಿಕಾರಿ ವರ್ಗ ಅತಿವೃಷ್ಟಿ ನಿರ್ವಹಣೆಗೆ ಸನ್ನದ್ಧರಾಗಬೇಕು. ಜನ-ಜಾನುವಾರು ಜೀವ ಹಾನಿಯಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಕಟ್ಟುನಿಟ್ಟಿನ ಸೂಚನೆಯನ್ನು ಜಿಲ್ಲಾಧಿಕಾರಿಗಳು ನೀಡಿದರು.



**ಪ್ರವಾಹ ಮುಂಜಾಗ್ರತೆಗೆ ಕಂಟ್ರೋಲ್ ರೂಮ್‌ಗಳು**
ಗದಗ ತಾಲೂಕು–08372–250009, ಗಜೇಂದ್ರಗಡ– 08381–298982, ಲಕ್ಷ್ಮೇಶ್ವರ– 08487–273273, ಮುಂಡರಗಿ–08371–262237, ನರಗುಂದ–08377–245243, ರೋಣ–08381–267239, ಶಿರಹಟ್ಟಿ–08487–242100.

ಗುಡುಗು, ಸಿಡಿಲು, ಮಳೆ ಮತ್ತು ಮುಂಜಾಗ್ರತೆ ಕುರಿತು ಹಳ್ಳಿಗಳಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಹಾಗೂ ವಾಟ್ಸ್‌ಅಪ್ ಗ್ರೂಪ್‌ಗಳಿಗೆ ಸಂದೇಶಗಳನ್ನು ಹಂಚಿಕೊಳ್ಳಲಾಗುತ್ತಿದೆ. ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಪ್ರವಾಹ ಪರಿಸ್ಥಿತಿ ಉಂಟಾಗಬಹುದಾದ 12 ಗ್ರಾಮ ಹಾಗೂ 14 ವಾರ್ಡ್‌ಗಳನ್ನು ಗುರುತಿಸಲಾಗಿದೆ. ಮಲಪ್ರಭ ನದಿ ಹಾಗೂ ಬೆಣ್ಣೆಹಳ್ಳ ಪ್ರವಾಹದಿಂದ ಪ್ರವಾಹಕ್ಕೊಳಗಾಗುವ ನರಗುಂದ ತಾಲೂಕಿನ 16 ಮತ್ತು ರೋಣ ತಾಲೂಕಿನ 16, ಹೀಗೆ ಒಟ್ಟು 32 ಗ್ರಾಮಗಳನ್ನು ಗುರುತಿಸಲಾಗಿದೆ.

ತುಂಗಭದ್ರಾ ನದಿ ಪ್ರವಾಹದಿಂದ ಪ್ರವಾಹಕ್ಕೊಳಗಾಗುವ ಶಿರಹಟ್ಟಿ ತಾಲೂಕಿನ 10 ಮತ್ತು ಮುಂಡರಗಿ ತಾಲೂಕಿನ 11 ಒಟ್ಟು 21 ಗ್ರಾಮಗಳನ್ನು ಗುರುತಿಸಲಾಗಿದೆ. ಜಿಲ್ಲೆಯಲ್ಲಿ 46 ಕಾಳಜಿ ಕೇಂದ್ರಗಳನ್ನು ಗುರುತಿಸಲಾಗಿದೆ. ಪ್ರವಾಹ ಮುಂಜಾಗ್ರತೆಗಾಗಿ ಅಗ್ನಿಶಾಮಕ ಇಲಾಖೆಯ ರಕ್ಷಣಾ ಸಾಮಗ್ರಿಗಳಾದ 49 ಲೈಫ್‌ಬಾಯ್, 50 ಲೈಫ್ ಜಾಕೆಟ್, 84 ರೋಪ್‌ಗಳು, 14 ಅಲ್ಯೂಮಿನಿಯಂ ಲ್ಯಾಡರ್, 24 ಉಸಿರಾಟದ ಸಲಕರಣೆಗಳು, 1 ಓಬಿಎಂ ಬೋಟ್‌ಗಳಿರುತ್ತವೆ.

ಪ್ರವಾಹ ಸಂಭವಿಸಬಹುದಾದ ನರಗುಂದ ತಾಲೂಕಿನ ಕೊಣ್ಣೂರು, ರೋಣ ತಾಲೂಕಿನ ಹೊಳೆ ಆಲೂರು, ಮುಂಡರಗಿ ತಾಲೂಕಿನ ಕೊರ್ಲಹಳ್ಳಿ, ಶಿರಹಟ್ಟಿ ತಾಲೂಕಿನ ಮಜ್ಜೂರು 4 ಕಡೆಗಳಲ್ಲಿ ಗೋಶಾಲೆ ತೆರೆಯಲು ಗುರುತಿಸಲಾಗಿರುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಪ್ರಶಾಂತ ವರಗಪ್ಪನವರ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಎ. ರಡ್ಡೇರ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಶಿವಾನಂದ ಗೌಡರ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ ಕೋಟಿಮನಿ ಸೇರಿದಂತೆ ಜಿಲ್ಲೆಯ ಆಯಾ ತಾಲೂಕುಗಳ ತಹಸೀಲ್ದಾರರು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಹಾಗೂ ಜಿಲ್ಲಾಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

ನಗರದ ತಗ್ಗು ಪ್ರದೇಶಗಳಲ್ಲಿನ ಮನೆಗಳಿಗೆ ಮಳೆ ನೀರು ನುಗ್ಗುವುದನ್ನು ತಡೆಯಲು ನಗರಸಭೆ ಅಧಿಕಾರಿಗಳು ಕಾರ್ಯೋನ್ಮುಖರಾಗಬೇಕು. ರಾಜಕಾಲುವೆಗಳ ಹಾಗೂ ಚರಂಡಿಗಳಲ್ಲಿನ ಭಗ್ನಾವಶೇಷಗಳನ್ನು ತೆರವುಗೊಳಿಸಬೇಕು. ಮಳೆ ನೀರು ಸರಾಗವಾಗಿ ಮುಂದೆ ಸಾಗಲು ಅನುವು ಮಾಡಿಕೊಡಬೇಕು ಎಂದು ನಗರಸಭೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ನಿರ್ದೇಶಿಸಿದರು.



### ಶಾಲಾ ಪ್ರಾರಂಭೋತ್ಸವದ ಪೂರ್ವಸಿದ್ಧತಾ ಸಭೆಯಲ್ಲಿ ಡಿಡಿಪಿಐ ಎಂ.ಎ.ರಡ್ಡೇರ

# ಮೌಲ್ಯಯುತ ಶಿಕ್ಷಣ ಎಲ್ಲರ ಸ್ವತ್ತಾಗಬೇಕು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮೌಲ್ಯಯುತ ಶಿಕ್ಷಣ ಪ್ರತಿಯೊಬ್ಬರ ಸ್ವತ್ತಾಗಬೇಕು. ಮಗುವಿಗೆ ತಂದೆ–ತಾಯಿ ಭೌತಿಕವಾಗಿ ಜನ್ಮ ನೀಡಿದರೆ, ಶಿಕ್ಷಣವು ಬೌದ್ಧಿಕ ಅಸ್ಮಿತೆ, ಅಸ್ತಿತ್ವ ನೀಡುತ್ತದೆ. ಅಂತಹ ಶಿಕ್ಷಣ ಉಳ್ಳವರ ಸ್ವತ್ತಾಗಬಾರದು ಎಂದು ಶಾಲಾ ಶಿಕ್ಷಣ ಇಲಾಖೆಯ ಗದಗ ಜಿಲ್ಲಾ ಉಪನಿರ್ದೇಶಕ ಎಂ.ಎ. ರಡ್ಡೇರ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಎಸ್‌ಟಿಪಿಬಿಎಂಬಿ ಸಭಾಭವನದಲ್ಲಿ ಹಮ್ಮಿಕೊಂಡ 2024–25ನೇ ಸಾಲಿನ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭೋತ್ಸವದ ಕುರಿತು ಮುಖ್ಯ ಶಿಕ್ಷಕರಿಗಾಗಿ ಪೂರ್ವಸಿದ್ಧತಾ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಸ್ತುತ ವರ್ಷ ಜಿಲ್ಲೆಯಲ್ಲಿ ಶೈಕ್ಷಣಿಕ ಬಲವರ್ಧನೆಗಾಗಿ 5 ಅಂಶಗಳ ಕಾರ್ಯಕ್ರಮಕ್ಕೆ ಒತ್ತು ನೀಡಲು ಯೋಜಿಸಲಾಗಿದೆ. ಶಾಲಾ ಸ್ವಚ್ಛತೆ ಹಾಗೂ ನೈರ್ಮಲೀಕರಣ, ದಾಖಲಾತಿ ಹೆಚ್ಚಿಸಲು ಆಂದೋಲನ, ಪರಿಣಾಮಕಾರಿ ಸೇತುಬಂಧ ಇಲಾಖೆಯ ಪ್ರೋತ್ಸಾಹಕ ಯೋಜನೆಗಳ ಸಮಗ್ರ



ಪರಿಚಯ, ಸಸ್ಯ ಶ್ಯಾಮಲ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ನಿರ್ಗಮಿತ ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಳಾ ತಾಪಸ್ಕರ ಮಾತನಾಡಿ, ಬ್ಲಾಕ್‌ನ ಮೊದಲ ಬಿಇಓ ಆಗಿ ಬಂದ ನನಗೆ ತಾವೆಲ್ಲ ನೀಡಿದ ಸಹಕಾರ ಮರೆಯಲಾರೆ ಎಂದು ಧನ್ಯವಾದ ತಿಳಿಸಿದರು. ಇದೇ ಸಂದರ್ಭದಲ್ಲಿ ಡಿಡಿಪಿಐ ಹಾಗೂ ಇಬ್ಬರು ಬಿಇಓಗಳನ್ನು ಸನ್ಮಾನಿಸಲಾಯಿತು.

ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಎಚ್.ಎಸ್. ರಾಮನಗೌಡ್ರ, ಇ.ಸಿ.ಓ ಹರೀಶ ಎಸ್, ಪ್ರೌಢವಿಭಾಗದ ಬಿ.ಆರ್.ಪಿ ಈಶ್ವರ ಮೆಡ್ಲೇರಿ, ಬಿ.ಆರ್.ಪಿ ಬಸವರಾಜ ಯರಗುಪ್ಪಿ ವಿವಿಧ ಕಾರ್ಯಯೋಜನೆಗಳನ್ನು ಮಂಡಿಸಿದರು.

ವೇದಿಕೆಯಲ್ಲಿ ಶಿಕ್ಷಣಾಧಿಕಾರಿಗಳ ಸಂಘದ ಅಧ್ಯಕ್ಷ ಎಂ.ಬಿ. ಹೊಸಮನಿ, ಎಸ್‌ಟಿಪಿಎಂಬಿ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕಿ ಅಯ್.ಬಿ. ಜಕ್ಕನಗೌಡ್ರ, ಗೊಜನೂರ ಶಾಲೆಯ ಮುಖ್ಯ ಶಿಕ್ಷಕ ಬಿ.ಎಚ್. ನಡುವಿನಮನಿ ಉಪಸ್ಥಿತರಿದ್ದರು.

ಮುಖ್ಯ ಶಿಕ್ಷಕ ಬಿ.ಎಂ. ಕುಂಬಾರ ಸ್ವಾಗತಿಸಿದರು. ಸಿ.ಆರ್.ಪಿಗಳಾದ ಜ್ಯೋತಿ ಗಾಯಕವಾಡ ಹಾಗೂ ಕೆ.ಪಿ. ಕಂಬಳಿ ಪ್ರಾರ್ಥಿಸಿದರು. ಉಮೇಶ ನೇಕಾರ ನಿರೂಪಿಸಿದರು. ಸತೀಶ ಬೋಮಲೆ ವಂದಿಸಿದರು. ಲಕ್ಷ್ಮೇಶ್ವರ ತಾಲೂಕಿನ ಸರಕಾರಿ, ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರು ಹಾಜರಿದ್ದರು.

ನೂತನವಾಗಿ ಶಿರಹಟ್ಟಿ ಕ್ಷೇತ್ರಶಿಕ್ಷಣಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡ ಎಚ್.ಎನ್. ನಾಯಕ ಮಾತನಾಡಿ, ತಾಲೂಕಿನ ಶಾಲೆ, ಶಿಕ್ಷಣದ ಅಭಿವೃದ್ಧಿಗಾಗಿ ಹಲವಾರು ಕನಸು ಹೊಂದಿದ್ದು, ಅವುಗಳ ಸಾಕಾರಕ್ಕಾಗಿ ತಮ್ಮೆಲ್ಲರ ಸಹಕಾರ ಕೋರುತ್ತೇನೆ. ಎಲ್ಲರೂ ಸೇರಿ ಕ್ಷೇತ್ರದ ಶೈಕ್ಷಣಿಕ ಸಾಧನೆಗಾಗಿ ಬದ್ಧರಾಗೋಣ ಎಂದರು.

### ಕೃಷಿ ಕೇಂದ್ರದಲ್ಲಿ ರಿಯಾಯತಿ ದರದಲ್ಲಿ ಬಿತ್ತನೆ ಬೀಜ ವಿತರಣೆ ಆರಂಭ

# ಬಿತ್ತನೆ ಬೀಜಕ್ಕಾಗಿ ಮುಗಿಬಿದ್ದ ರೈತರು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಪಟ್ಟಣ ಸೇರಿದಂತೆ ಬಹುತೇಕ ಗ್ರಾಮಗಳಲ್ಲಿ ಮುಂಗಾರು ಮಳೆ ಹದವಾಗಿ ಆಗಿದ್ದು, ಬಹುತೇಕ ರೈತರು ಬೀಜ ಬಿತ್ತನೆಗೆ ಸಜ್ಜಾಗುತ್ತಿದ್ದಾರೆ. ಈಗಾಗಲೇ ಭೂಮಿಯನ್ನು ಹದಗೊಳಿಸಿಕೊಂಡಿರುವ ರೈತರು ಬಿತ್ತನೆ ಮಾಡಲು ಅಣಿಯಾಗುತ್ತಿದ್ದಾರೆ. ಅದಕ್ಕಾಗಿ ಕೃಷಿ ಕೇಂದ್ರದಲ್ಲಿ ದೊರೆಯುವ ರಿಯಾಯತಿ ದರದ ಬಿತ್ತನೆ ಬೀಜಗಳನ್ನು ಕೊಳ್ಳಲು ಸೋಮವಾರ ಮುಂಜಾನೆಯಿಂದಲೇ ರೈತರು ಮುಗಿಬಿದ್ದಿರುವದು ಕಂಡು ಬಂದಿತು.

ಕೃಷಿ ಕೇಂದ್ರದಲ್ಲಿ ಸೋಮವಾರದಿಂದ ರಿಯಾಯತಿ ದರದಲ್ಲಿ ಹೆಸರು ಮತ್ತು ತೊಗರಿ ಬೀಜಗಳನ್ನು ವಿತರಣೆ ಮಾಡಲಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ರೈತರು ಬೀಜಗಳನ್ನು ಕೊಳ್ಳಲು ಕೃಷಿ ಕೇಂದ್ರಕ್ಕೆ ದೌಡಾಯಿಸಿದ್ದರು. ತಾಲೂಕಿನಲ್ಲಿ ಹೆಚ್ಚಾಗಿ ಹೆಸರು ಶೇಂಗಾ, ತೊಗರಿ, ಬಿತ್ತನೆಗೆ ಇದೀಗ ಸಕಾಲವಾಗಿದ್ದು, ರೈತರು ಸಾಕಷ್ಟು ಸಂಖ್ಯೆಯಲ್ಲಿ ಕೃಷಿ ಕೇಂದ್ರಕ್ಕೆ ಆಗಮಿಸಿದ್ದರು. ಕಳೆದ ವರ್ಷ ಮುಂಗಾರು ಹಿಂಗಾರು ಮಳೆ ವಿಫಲವಾಗಿ ರೈತರು ಸಂಕಷ್ಟಕ್ಕೆ ಸಿಲುಕಿದ್ದರು. ಆದರೆ ಈ ಬಾರಿ ಮುಂಗಾರು ರೈತರಲ್ಲಿ ಆಶಾಭಾವನೆ ಮೂಡಿಸಿದ್ದು, ಈ ಬಾರಿ ಒಟ್ಟಾರೆ 32.618 ಹೆಕ್ಟರ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ.



ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ ಹೆಸರು ಈಗಾಗಲೇ 15 ಕ್ವಿಂಟಲ್ ಶೇಂಗಾ, 30 ಕ್ವಿಂಟಲ್ ಹೆಸರು, 30 ಕ್ವಿಂಟಲ್ ತೊಗರಿ ಸಂಗ್ರಹವಿದ್ದು, ಎಲ್ಲ ರೈತರಿಗೂ ರಿಯಾಯತಿ ಬಿತ್ತನೆ ಬೀಜಗಳು ಲಭ್ಯವಾಗಲಿದೆ. ರೈತರು ತಮ್ಮ ಆಧಾರ್ ಕಾರ್ಡ್, ಉತಾರ ತಂದು ಸಬ್ಸಿಡಿ ರೂಪದಲ್ಲಿ ಬೀಜಗಳನ್ನು ಪಡೆಯಬೇಕು. ಇಲಾಖೆಗೆ ಇನ್ನೂ ಅವಶ್ಯಕ ಪ್ರಮಾಣದಲ್ಲಿ ಬಿತ್ತನೆ ಬೀಜಗಳು ಬರಲಿದ್ದು, ಯಾವುದೇ ರೀತಿಯಲ್ಲಿ ರೈತರು ಆತಂಕಕ್ಕೊಳಗಾಗದೆ ಎಲ್ಲರೂ ಸಹಕಾರದಿಂದ ಬಿತ್ತನೆ ಬೀಜಗಳನ್ನು ಪಡೆಯಬಹುದಾಗಿದೆ ಎಂದು ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ ಮಾಹಿತಿ ನೀಡಿದ್ದಾರೆ.

ಈಗಾಗಲೇ ರೈತರು ಬಿತ್ತನೆ ಬೀಜ ಪಡೆಯಲು ರೈತ ಸಂಪರ್ಕ ಕೇಂದ್ರಕ್ಕೆ ಬರುತ್ತಿದ್ದಾರೆ. ಸರಕಾರ ರೈತರಿಗೆ ಗುಣಮಟ್ಟದ ಬೀಜಗಳನ್ನು ವಿತರಣೆ ಮಾಡಬೇಕು. ಒಬ್ಬ ರೈತರಿಗೆ 3 ಪ್ಯಾಕೆಟ್ ಬಿತ್ತನೆ ಬೀಜಗಳು ನೀಡಲಾಗುತ್ತಿದ್ದು, ಅದರ ಪ್ರಮಾಣವನ್ನು ಹೆಚ್ಚಿಸಬೇಕು ಮತ್ತು ರೈತ ಸಂಪರ್ಕ ಕೇಂದ್ರದಲ್ಲಿ ಬೀಜಗಳಿಗೆ ಬರುವ ರೈತರಿಗೆ ನೆರಳು ದೊರೆಯುವಂತೆ ಶೆಡ್ ನಿರ್ಮಾಣ ಮಾಡಬೇಕು.

**– ಟಾಕಪ್ಪ ಸಾತಪೂತೆ.**
**ಭಾರತೀಯ ಕಿಸಾನ್ ಸಂಘದ ತಾಲೂಕಾಧ್ಯಕ್ಷ.**

# ರೈತರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ 2024-25ನೇ ಸಾಲಿನ ಪೂರ್ವ ಮುಂಗಾರು ಮಳೆ ಉತ್ತಮವಾಗಿದ್ದು, ಮುಂಗಾರು ಹಂಗಾಮಿನಲ್ಲಿ ಕೂಡ ಉತ್ತಮವಾಗಿ ಮಳೆಬರುವ ನಿರೀಕ್ಷೆಯಿದೆ. ರೈತರು ಬಿತ್ತನೆಗೆ ಅವಸರ ಮಾಡದೇ, ಮಣ್ಣಿನಲ್ಲಿ ಅವಶ್ಯಕ ತೇವಾಂಶವಿರುವ ಬಗ್ಗೆ ಖಚಿತ ಪಡಿಸಿಕೊಂಡು ಬಿತ್ತನೆ ಕೈಗೊಳ್ಳಲು ತಿಳಿಸಲಾಗಿದ್ದು, ಇಲ್ಲದೇ ಹೋದರೆ ಬಿತ್ತಿದ ಬೀಜದಿಂದ ಸರಿಯಾಗಿ ಮೊಳಕೆ ಬರಲು ಸಾಧ್ಯವಾಗದೇ ಇರಬಹುದು, ಅಥವಾ ಬೆಳೆಯ ಬೆಳವಣಿಗೆ ವೇಳೆಗೆ ತೇವಾಂಶ ಕೊರತೆ ಉಂಟಾಗಬಹುದಾಗಿದೆ.

ಜಿಲ್ಲೆಯಲ್ಲಿ 2024-25ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ 1.25 ಲಕ್ಷ ಹೆ. ಹೆಸರು, ಮೆಕ್ಕೆ ಜೋಳ 1 ಲಕ್ಷ ಹೆ., 30 ಸಾವಿರ ಹೆ. ಶೇಂಗಾ, 11 ಸಾವಿರ ಹೆ. ಸೂರ್ಯಕಾಂತಿ, ಹಾಗೂ 20 ಸಾವಿರ ಹೆ. ಹತ್ತಿ ಸೇರಿದಂತೆ ಒಟ್ಟು 3 ಲಕ್ಷ 1 ಸಾವಿರ ಹೆ. ಪ್ರದೇಶದಲ್ಲಿ ಬಿತ್ತನೆ ಕ್ಷೇತ್ರದ ಗುರಿಯಿದೆ.

ಜಿಲ್ಲೆಯ ರೈತರಿಗೆ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಕೊರತೆಯಾಗದಂತೆ ಸಾಕಷ್ಟು ಪ್ರಮಾಣದಲ್ಲಿ ದಾಸ್ತಾನೀಕರಿಸಿದೆ. ಕಾರಣ, ರೈತರು ಯಾವುದೇ ರೀತಿಯ ಆತಂಕಗೊಳ್ಳುವ ಅಗತ್ಯವಿಲ್ಲ.

ಕಳೆದ ಸಾಲಿನಂತೆ ಪ್ರಸಕ್ತ ವರ್ಷವೂ ಕೂಡ ಜಿಲ್ಲೆಯ ರೈತ ಸಂಪರ್ಕ ಕೇಂದ್ರಗಳಲ್ಲಿ ರಿಯಾಯಿತಿ ದರದಲ್ಲಿ, ಇಲಾಖೆಯ ಮಾರ್ಗಸೂಚಿಯನ್ವಯ ಬಿತ್ತನೆ ಬೀಜಗಳನ್ನು ವಿತರಿಸಲಾಗುತ್ತಿದೆ. ಅಲ್ಲದೇ ಕರ್ನಾಟಕ ರಾಜ್ಯ ಬೀಜ ನಿಗಮ, ಕರ್ನಾಟಕ ಎಣ್ಣೆಕಾಳು ಬೆಳೆಗಾರರ ಮಹಾಮಂಡಳ ನಿಯಮಿತ, ರಾಷ್ಟ್ರೀಯ ಬೀಜ ನಿಗಮ ಮತ್ತು ಖಾಸಗಿ ಮಾರಾಟ ಮಳಿಗೆಗಳಲ್ಲಿ ವಿವಿಧ ಬೆಳೆಗಳ ಬಿತ್ತನೆ ಬೀಜದ ದಾಸ್ತಾನು ಮಾಡಿಕೊಳ್ಳಲಾಗಿದೆ. ರೈತ ಬಂಧುಗಳು ಬಿತ್ತನೆ ಕೈಗೊಳ್ಳುವ ಮುನ್ನ ಕಡ್ಡಾಯವಾಗಿ ಬೀಜೋಪಚಾರ ಮಾಡಿ ಬಿತ್ತನೆ ಮಾಡಲು ವಿನಂತಿಸಿದೆ.

ಜಿಲ್ಲೆಯಲ್ಲಿ ಯೂರಿಯಾ 7732.79 ಮೆ.ಟನ್, ಡಿ.ಎ.ಪಿ. 2574.65 ಮೆ.ಟನ್, ಎಂ.ಓ.ಪಿ. 670.20 ಮೆ.ಟನ್, ಎಸ್.ಎಸ್.ಪಿ. 174.10 ಮೆ.ಟನ್, ಹಾಗೂ ಇತರೆ ಸಂಯುಕ್ತ ರಸಗೊಬ್ಬರ 4435.19 ಮೆ.ಟನ್, ಒಟ್ಟಾರೆ 15586.93 ಮೆ.ಟನ್‌ಗಳಷ್ಟು ವಿವಿಧ ರಸಗೊಬ್ಬರಗಳ ದಾಸ್ತಾನು ಮಾಡಲಾಗಿದ್ದು, ರಸಗೊಬ್ಬರಗಳ ಕೊರತೆ ಇರುವುದಿಲ್ಲ.

ಅಧಿಕೃತ ಪರವಾನಗಿ ಹೊಂದಿದ ಪರಿಕರ ಮಾರಾಟಗಾರರಲ್ಲಿ ಮಾತ್ರ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳನ್ನು ಖರೀದಿಸಬೇಕು.

ಕೃಷಿ ಪರಿಕರಗಳನ್ನು ಎಂ.ಆರ್.ಪಿ.ಗಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡಿದಲ್ಲಿ ರೈತ ಸಂಪರ್ಕ ಕೇಂದ್ರಗಳ ಕೃಷಿ ಅಧಿಕಾರಿಗಳು, ತಾಲೂಕು ಸಹಾಯಕ ಕೃಷಿ ನಿರ್ದೇಶಕರು ಹಾಗೂ ವಿಭಾಗದ ಉಪ ಕೃಷಿ ನಿರ್ದೇಶಕರನ್ನು ಸಂಪರ್ಕಿಸಲು ಕೋರಿದೆ. ಹೆಚ್ಚಿನ ದರದಲ್ಲಿ ಮಾರಾಟ ಮಾಡುವವರ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಲಾಗುವುದೆಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾರ್ಕ್ಸ್‌ವಾದಿಗಳಾಗಬೇಡಿ, ಮಾನವತಾವಾದಿಗಳಾಗಿ



■ವಿಜಯಸಾಕ್ಷಿ ಸುದ್ದಿ, ನರೇಗಲ್

ನೀವು ಶಾಲೆ ಕಲಿಯುತ್ತಿರುವುದು ನಿಮ್ಮ ವ್ಯಕ್ತಿತ್ವವನ್ನು ವಿಕಸನಗೊಳಿಸುವುದಕ್ಕಾಗಿ. ಈ ಸಮಯದಲ್ಲಿ ನೀವು ನಿಮ್ಮಲ್ಲಿ ವಿದ್ಯಾಭ್ಯಾಸದ ಜೊತೆಗೆ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡು ಮಾನವತಾವಾದಿಗಳಾಗಬೇಕೇ ಹೊರತು, ಅಂಕಗಳ ಬೆನ್ನು ಹತ್ತಿ ಮಾರ್ಕ್ಸ್‌ವಾದಿಗಳಾಗಬೇಡಿ ಎಂದು ಎಸ್.ಎ. ಪಿಯು ಕಾಲೇಜಿನ ಪ್ರಾಚಾರ್ಯ ವೈ.ಸಿ. ಪಾಟೀಲ ಹೇಳಿದರು.

ಪಟ್ಟಣದ ಸೈಬರ್‌ಟೆಕ್ ಕಂಪ್ಯೂಟರ್ ಹಾಗೂ ಸಾಧನಾ ಕೋಚಿಂಗ್ ಸೆಂಟರ್ ವತಿಯಿಂದ ಏರ್ಪಡಿಸಿದ್ದ 24-25ನೇ ಸಾಲಿನ ಬೇಸಿಗೆ ತರಬೇತಿ ಶಿಬಿರದ ಮುಕ್ತಾಯ ಸಮಾರಂಭದಲ್ಲಿ ಅವರು ಮಾತನಾಡಿದರು.

ನಿಮ್ಮ ಬುದ್ಧಿಮತ್ತೆಗೆ ತಕ್ಕಂತೆ ನೀವು ಅಂಕಗಳನ್ನು ಪಡೆದುಕೊಳ್ಳಿ. ಆದರೆ, ನಿಮ್ಮಲ್ಲಿ ಮಾನವೀಯ ಮೌಲ್ಯಗಳು ಇಲ್ಲದೆ ಹೋದರೆ ನೀವು ಏನೇ ಸಾಧನೆ ಮಾಡಿದರೂ ಅದು ಶೂನ್ಯಕ್ಕೆ ಸಮ ಎಂಬುದನ್ನು ಮರೆಯಬೇಡಿ ಎಂದರು.


ಅಧ್ಯಕ್ಷತೆ ವಹಿಸಿದ್ದ ವಿರುಪಾಕ್ಷ ಸಂಗನಾಳ ಮಾತನಾಡಿ, ಬೇಸಿಗೆಯ ರಜೆಯೆಂದು ನೀವು ಸಮಯ ಹಾಳು ಮಾಡದೆ ಇಲ್ಲಿ ಬಂದು ವಿದ್ಯೆಯನ್ನು ಕಲಿತಿದ್ದೀರಿ. ಇಲ್ಲಿನ ಅಧ್ಯಾಪಕರು ನಿಮಗೆ ಸೂಕ್ತ ಬೋಧನೆಯನ್ನು ಮಾಡಿ ನಿಮ್ಮನ್ನು ಸಿದ್ಧಗೊಳಿಸಿದ್ದಾರೆ. ಇಲ್ಲಿ ಕಲಿತ ವಿದ್ಯೆಯನ್ನು ಸದುಪಯೋಗಪಡಿಸಿಕೊಂಡು ಭವಿಷ್ಯದಲ್ಲಿ ಉತ್ತಮ ಫಲಿತಾಂಶ ಪಡೆಯಿರಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಳೆದ ಬೇಸಿಗೆ ಶಿಬಿರದಲ್ಲಿ ತರಬೇತಿ ಪಡೆದುಕೊಂಡು ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಸಾಧನೆ ಮಾಡಿದ ಲೀಲಾ ಸಂಕನಗೌಡ್ರ (ಕೋಟುಮಚಗಿ), ಬಸಮ್ಮ ಕುರಿ (ಹಾಲಕೆರೆ), ವಿಕಾಸ ಸಂಕನಗೌಡ್ರ(ನರೇಗಲ್ಲ) ಇವರುಗಳನ್ನು ಸನ್ಮಾನಿಸಲಾಯಿತು. ವೇದಿಕೆಯ ಮೇಲೆ ವೀರೇಶ ವಾಲಿ, ಶರಣಯ್ಯ ಬಾಗಲತ್ತಿ, ಸಾಗರ ಕುಂಬಾರ, ಜಯಕಾಂತ ನರಗುಂದ, ಶಿಲ್ಪಾ ಜುಟ್ಲದ, ವಿನಯಶ್ರೀ ಪರಯ್ಯನಮಠ, ಅನ್ನಪೂರ್ಣಾ ಪಾಟೀಲ, ಅನುಷಾ ತಿಪ್ಪಣ್ಣವರ, ರವಿ ಬಿಸನಳ್ಳಿ ಇದ್ದರು.

ಮುತ್ತಣ್ಣ ಹೊನ್ನವಾಡ ಪ್ರಾಸ್ತಾವಿಕ ನುಡಿಗಳನ್ನಾಡಿದರು. ತೋಟಯ್ಯ ಆರಾಧ್ಯಮಠ ಸ್ವಾಗತಿಸಿದರು. ಸ್ನೇಹಾ ಜುಟ್ಲದ ನಿರೂಪಿಸಿದರು. ಸವಿತಾ ವಂದಿಸಿದರು.

## ಆರೋಗ್ಯದ ಆಧಾರದ ಮೇಲೆ ಮಧ್ಯಂತರ ಜಾಮೀನು ವಿಸ್ತರಿಸುವಂತೆ ಸುಪ್ರೀಂ ಮೆಟ್ಟಿಲೇರಿದ ಕೇಜ್ರಿವಾಲ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ದೆಹಲಿ ಅಬಕಾರಿ ನೀತಿ ಪ್ರಕರಣದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಬಂಧಿತರಾಗಿರುವ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಜೂನ್ 2 ರಂದು ಜೈಲಿಗೆ ವಾಪಸಾಗಬೇಕಿದ್ದು, ಪಿಇಟಿ-ಸಿಟಿ ಸ್ಕ್ಯಾನ್ ಸೇರಿದಂತೆ ಕೆಲವು ವೈದ್ಯಕೀಯ ಪರೀಕ್ಷೆಗಳಿಗೆ ಒಳಗಾಗಬೇಕು ಎಂಬ ಕಾರಣಕ್ಕಾಗಿ ಮಧ್ಯಂತರ ಜಾಮೀನನ್ನು ಇನ್ನೂ ಏಳು ದಿನಗಳವರೆಗೆ ವಿಸ್ತರಿಸಬೇಕೆಂದು ಸುಪ್ರೀಂ ಕೋರ್ಟ್‌ಗೆ ಮನವಿ ಮಾಡಿದ್ದಾರೆ.

ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಮನಿ ಲಾಂಡರಿಂಗ್ ಪ್ರಕರಣದಲ್ಲಿ ಬಂಧಿತರಾಗಿರುವ ಮುಖ್ಯಮಂತ್ರಿಗೆ ಲೋಕಸಭೆ ಚುನಾವಣೆಗೆ ಪ್ರಚಾರ ಮಾಡಲು ಅನುಕೂಲವಾಗುವಂತೆ ಸುಪ್ರೀಂ ಕೋರ್ಟ್ ಮೇ 10 ರಂದು 21 ದಿನಗಳ ಮಧ್ಯಂತರ ಜಾಮೀನು ನೀಡಿತ್ತು.

### ಲೋಕಸಭಾ ಚುನಾವಣೆ ನಿಮಿತ್ತ ಮಾಧ್ಯಮ, ಹವ್ಯಾಸಿ ಛಾಯಾಗ್ರಾಹಕರಿಗಾಗಿ ಸ್ಪರ್ಧೆ

# ಛಾಯಾಚಿತ್ರ ಸ್ಪರ್ಧೆ ವಿಜೇತರ ಘೋಷಣೆ

■ವಿಜಯಸಾಕ್ಷಿ ಸುದ್ದಿ, ಗದಗ



ಸಾರ್ವತ್ರಿಕ ಲೋಕಸಭಾ ಚುನಾವಣೆ-2024ರ ಅಂಗವಾಗಿ ಕರ್ನಾಟಕ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ವತಿಯಿಂದ ಮಾಧ್ಯಮ ಹಾಗೂ ಹವ್ಯಾಸಿ ಛಾಯಾಗ್ರಾಹಕರಿಗಾಗಿ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಛಾಯಾಚಿತ್ರ ಸ್ಪರ್ಧೆಯ ವಿಜೇತರನ್ನು ಘೋಷಿಸಲಾಗಿದೆ.

ಪ್ರಜಾವಾಣಿ/ಡೆಕ್ಕನ್ ಹೆರಾಲ್ಡ್ ದಿನಪತ್ರಿಕೆಯ ಮಂಗಳೂರು ಛಾಯಾಗ್ರಾಹಕ ಹೆಚ್. ಫಕ್ರುದ್ದೀನ್ ಪ್ರಥಮ, ಬಾಗಲಕೋಟೆಯ ಹಳ್ಳಿ ಸಂದೇಶ ಪತ್ರಿಕೆಯ ಇಂದ್ರಕುಮಾರ್.ಬಿ ದಸ್ತೇನವರ ದ್ವಿತೀಯ, ಮೂಡಬಿದಿರೆಯ ಹವ್ಯಾಸಿ ಛಾಯಾಗ್ರಾಹಕ ಜಿನೇಶ್ ಪ್ರಸಾದ್ ತೃತೀಯ, ಉಡುಪಿಯ ಉದಯವಾಣಿ ಪತ್ರಿಕೆಯ ಅಸ್ಟ್ರೋ ಮೋಹನ್ ಹಾಗೂ ಬೆಂಗಳೂರಿನ ಸಂಜೆ ಸಮಯ ಪತ್ರಿಕೆಯ ಪೂರ್ಣಿಮ ರವಿ ಸಮಾಧಾನಕರ ಮತ್ತು ವಿಶೇಷ ಬಹುಮಾನಕ್ಕೆ ಮೈಸೂರಿನ ವಿಜಯವಾಣಿ ಪತ್ರಿಕೆಯ ಕೆ.ಹೆಚ್. ಚಂದ್ರು ಹಾಗೂ ಕಲಬುರಗಿಯ ವಿಜಯ ಕರ್ನಾಟಕ ಪತ್ರಿಕೆಯ ಶಿವಶರಣಪ್ಪ ಬೆನ್ನೂರ್ ಆಯ್ಕೆಯಾಗಿದ್ದಾರೆ.

ರಾಜ್ಯಮಟ್ಟದ ಛಾಯಾಚಿತ್ರ ಸ್ಪರ್ಧೆಯ ಆಯ್ಕೆ ಸಮಿತಿಯಲ್ಲಿ ಅಧ್ಯಕ್ಷರಾಗಿ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ಮಾಧ್ಯಮ ವಿಭಾಗದ ವಿಶೇಷ ಅಧಿಕಾರಿ ಎ.ವಿ. ಸೂರ್ಯಸೇನ್ ಐಎಫ್‌ಎಸ್, ಸದಸ್ಯರಾಗಿ ರಾಜ್ಯಮಟ್ಟದ ಸ್ವೀಪ್ ಹಿರಿಯ ಸಮಾಲೋಚಕರಾದ ನಿವೃತ್ತ ಐ.ಎ.ಎಸ್ ಅಧಿಕಾರಿ ಪಿ.ಎಸ್. ವಸ್ತ್ರದ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಛಾಯಾಚಿತ್ರ ವಿಭಾಗದ ಅಧಿಕಾರಿ ಚಂದ್ರಶೇಖರ್, ನಿವೃತ್ತ ಹಾಗೂ ಹಿರಿಯ ಛಾಯಾಗ್ರಾಹಕರಾದ ವಿಶ್ವನಾಥ್ ಸುವರ್ಣ ಹಾಗೂ ಸದಸ್ಯ ಕಾರ್ಯದರ್ಶಿಯಾಗಿ ಹಿರಿಯ ಸಹಾಯಕ ನಿರ್ದೇಶಕರಾದ ಜಡಿಯಪ್ಪ ಗೆದ್ಲಗಟ್ಟಿ ಅವರನ್ನು ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ವತಿಯಿಂದ ನೇಮಿಸಲಾಗಿತ್ತು.



ಸಾರ್ವತ್ರಿಕ ಲೋಕಸಭಾ ಚುನಾವಣೆ-2024ರ ಮತದಾನ ಕರ್ನಾಟಕ ರಾಜ್ಯದಲ್ಲಿ ಏಪ್ರಿಲ್ 26 ಮತ್ತು ಮೇ 7ರಂದು ಎರಡು ಹಂತದಲ್ಲಿ ಜರುಗಿತ್ತು.

ಜಗತ್ತಿನ ಅತಿದೊಡ್ಡ ಪ್ರಜಾಪಭುತ್ವ ದೇಶವಾಗಿರುವ ನಮ್ಮ ಭಾರತದಲ್ಲಿ ಚುನಾವಣೆಯನ್ನು 'ಪ್ರಜಾಪ್ರಭುತ್ವದ ಹಬ್ಬ'ದಂತೆ ಆಚರಿಸಲಾಗುತ್ತಿದೆ.

ಕಳೆದ ಲೋಕಸಭಾ ಚುನಾವಣೆ-2019 ಹಾಗೂ ಸಾರ್ವತ್ರಿಕ ಕರ್ನಾಟಕ ವಿಧಾನಸಭೆ ಚುನಾವಣೆ-2023ರ ಸಂದರ್ಭದಲ್ಲಿ ಸಹ ಮಾಧ್ಯಮಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮತ್ತು ಹವ್ಯಾಸಿ ಪತ್ರಿಕಾ ಛಾಯಾಗ್ರಹಕರಿಗಾಗಿ ಮತದಾನದ ವಿಷಯದ ಬಗ್ಗೆ ರಾಜ್ಯ ಮಟ್ಟದ ಛಾಯಾಚಿತ್ರ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿತ್ತು.

ಈ ಹಿನ್ನೆಲೆಯಲ್ಲಿ ಪ್ರಸ್ತುತ ಸಾರ್ವತ್ರಿಕ ಲೋಕಸಭಾ ಚುನಾವಣೆ 2024ರ ನಿಮಿತ್ತ ರಾಜ್ಯ ಮಟ್ಟದ ಛಾಯಾಚಿತ್ರ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ಅತ್ಯುತ್ತಮ ಛಾಯಾಚಿತ್ರ ತೆಗೆದ ಛಾಯಾಗ್ರಾಹಕರಿಗೆ ಪ್ರಮಾಣಪತ್ರ ಹಾಗೂ ನಗದು ಬಹುಮಾನವನ್ನು ನೀಡಲಾಗುತ್ತದೆ.

ರಾಜ್ಯಮಟ್ಟದ ಈ ಸ್ಪರ್ಧೆಯಲ್ಲಿ ಮಾಧ್ಯಮಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮತ್ತು ಹವ್ಯಾಸಿ ಪತ್ರಿಕಾ ಛಾಯಾಗ್ರಹಕರು ಸೇರಿ ಒಟ್ಟು 219 ಜನರು ಭಾಗವಹಿಸಿದ್ದರು.

ಕಳೆದ ಎರಡು ಸಾರ್ವತ್ರಿಕ ಚುನಾವಣೆಗಳ ಸಂದರ್ಭದಲ್ಲಿ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಛಾಯಾಚಿತ್ರ ಸ್ಪರ್ಧೆಯ ಮೂಲಕ ಚುನಾವಣಾ ಸಂಬಂಧಿತ ಅತ್ಯುತ್ತಮ ಹಾಗೂ ಸಂಗ್ರಹಯೋಗ್ಯ ಛಾಯಾಚಿತ್ರಗಳನ್ನು ಭಾರತ ಚುನಾವಣಾ ಆಯೋಗ ಪ್ರಶಂಸಿವುದರ ಜೊತೆಗೆ, ತನ್ನ ವರದಿ ಹಾಗೂ ಪುಸ್ತಕಗಳ ಮುಖಪುಟಗಳಲ್ಲಿ ನಮ್ಮ ರಾಜ್ಯದ ಈ ಛಾಯಾಚಿತ್ರಗಳನ್ನು ಬಳಸಿಕೊಂಡಿರುವುದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ಛಾಯಾಗ್ರಹಕರು ತಾವು ತೆಗೆದ ಗರಿಷ್ಠ 5 ಅತ್ಯುತ್ತಮ ಛಾಯಾಚಿತ್ರಗಳನ್ನು ಕಳುಹಿಸಿದ್ದರು. ಪ್ರಶಸ್ತಿಗೆ ಆಯ್ಕೆಯಾದ ಎಲ್ಲರಿಗೂ ಮುಖ್ಯ ಚುನಾವಣಾಧಿಕಾರಿಗಳು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.



# ಚಟಪಲ್ಲಿಯವರ ಸೇವಾಕಾರ್ಯ ಅಮೋಘ

■ವಿಜಯಸಾಕ್ಷಿ ಸುದ್ದಿ, ಗದಗ



ಗ್ರಾಮೀಣಾಭಿವೃದ್ಧಿ-ಪಂಚಾಯತ್‌ರಾಜ್ ವಿಶ್ವವಿದ್ಯಾಲಯದ ಬೆಳವಣಿಗೆಯಲ್ಲಿ ವಿಶ್ವವಿದ್ಯಾಲಯದ ಕುಲಪತಿಗಳಾಗಿ ವಿಷ್ಣುಕಾಂತ ಚಟಪಲ್ಲಿಯವರು ಅಮೋಘವಾದ ಕಾರ್ಯವನ್ನು ನಿರ್ವಹಿಸಿರುವುದು ಅಭಿನಂದನಾರ್ಹ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅಭಿಪ್ರಾಯಪಟ್ಟರು.

ಸೇವಾ ನಿವೃತ್ತಿ ಹೊಂದಿದ ನಿಮಿತ್ತ ವಿಷ್ಣುಕಾಂತ ಚಟಪಲ್ಲಿಯ ವರನ್ನು ಸನ್ಮಾನಿಸಿ ಮಾತನಾಡಿದ ಅವರು, ಗದಗ ನಗರದಲ್ಲಿ ನೂತನವಾಗಿ ಪ್ರಾರಂಭವಾದ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಚಟಪಲ್ಲಿಯವರು 4 ವರ್ಷಗಳವರೆಗೆ ಕುಲಪತಿಗಳಾಗಿ ವಿಶ್ವವಿದ್ಯಾಲಯದ ಸರ್ವತೋಮುಖ ಅಬಿವೃದ್ಧಿಯನ್ನು ಸಾಧಿಸುವಲ್ಲಿ ಶ್ರಮಿಸುವ ಮೂಲಕ ಕರ್ನಾಟಕದಲ್ಲಿಯೇ ಪ್ರಸಿದ್ಧಿ ಪಡೆಯುವಂತೆ ಮಾಡಿದ್ದಾರೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ವಿಷ್ಣುಕಾಂತ ಚಟಪಲ್ಲಿ, ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರ ಇಚ್ಛಾಶಕ್ತಿಯ ಪರಿಣಾಮವಾಗಿ ವಿಶ್ವವಿದ್ಯಾಲಯ ಬೆಳವಣಿಗೆಯಾಗಿದೆ. ಅಲ್ಲದೇ ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಅವರು ವಿಧಾನ ಪರಿಷತ್‌ನಲ್ಲಿ ಪಕ್ಷಾತೀತವಾಗಿ ತಮ್ಮ ಪ್ರಶ್ನೆಗಳ ಮೂಲಕ ಸರ್ಕಾರದ ಗಮನ ಸೆಳೆದು ವಿಶ್ವವಿದ್ಯಾಲಯದ ಅಭಿವೃದ್ಧಿಗೆ ಭಾಜನರಾಗಿದ್ದಾರೆ ಎಂದರು. ಈ ಸಂದರ್ಭದಲ್ಲಿ ವಿಷ್ಣುಕಾಂತ ಚಟಪಲ್ಲಿಯವರ ಧರ್ಮಪತ್ನಿ ವಂದಿತಾ ಚಟಪಲ್ಲಿ, ವಿಶ್ವವಿದ್ಯಾಲಯದ ರಜಿಸ್ಟ್ರಾರ್ ಎಸ್.ವಿ. ನಾಡಗೌಡರ, ಪ್ರೊ. ಎಸ್.ಐ. ಮೇಟಿ, ಪ್ರೊ. ಕಿಶೋರಬಾಬು ಜೆ. ನಾಗರಕಟ್ಟಿ, ಡಾ. ಎಮ್.ಡಿ. ಸಾಮುದ್ರಿ, ಡಾ. ಬೂದೇಶ ಕಣಾಜ ಉಪಸ್ಥಿತರಿದ್ದು ಶುಭ ಹಾರೈಸಿದರು.

# ಆಭರಣ ಕಳ್ಳರ ಬಂಧನ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಬಸ್ ನಿಲ್ದಾಣದಲ್ಲಿ ಆಭರಣ ಕಳ್ಳತನ ಮಾಡಿದ ಚಾಲಾಕಿ ಮಹಿಳೆಯರನ್ನು ಲಕ್ಷ್ಮೇಶ್ವರ ಪೊಲೀಸರು ಬಂಧಿಸಿ ಆಭರಣಗಳನ್ನು ವಶಪಡಿಸಿಕೊಂಡಿದ್ದಾರೆ.

ಕಲಬುರ್ಗಿಯ ನಾಗೇಶ್ವರಿ ಸಂದೀಪ ಉಪಾಧ್ಯಾ(38), ಶೀತಲ್ ಅಮಿತ ಪಾಟೀಲ (40) ಅವರನ್ನು ಬಂಧಿಸಿ ಅವರಿಂದ ಒಟ್ಟು 3,84,500 ರೂ ಮೌಲ್ಯದ 77 ಗ್ರಾಂ ಬಂಗಾರದ ಆಭರಣಗಳನ್ನು ವಶಪಡಿಸಿಕೊಳ್ಳಲಾಗಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡರ ಮಾರ್ಗದರ್ಶನ, ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್‌ಐ ಈರಪ್ಪ ರಿತ್ತಿ, ಚನ್ನಬಸವ ಬಬಲಿ, ಎಎಸ್‌ಐ ಎಂ.ಎ. ಮೌಲ್ವಿ ನೇತೃತ್ವದಲ್ಲಿ ಕಾರ್ಯಾಚರಣೆಗಿಳಿದ ತಂಡದಲ್ಲಿ ಗುರು ಬೂದಿಹಾಳ, ಸಂಜು ಕೊರಡೂರ, ಮಧುಚಂದ್ರ ಧಾರವಾಡ, ವಿದ್ಯಾಶ್ರೀ ಹದಲಿ, ಅಪ್ಪಣ್ಣ ರಾಠೋಡ, ಎಮ್.ಎ. ಶೇಖ, ಎಮ್.ಎಸ್. ಬಳ್ಳಾರಿ, ಆನಂದ ಕಮ್ಮಾರ, ಗಣೇಶ ಗ್ರಾಮಪುರೋಹಿತ್, ಹೆಚ್.ಐ. ಕಲ್ಲಣ್ಣವರ, ಪಾಂಡುರಂಗರಾವ, ಹನುಮರೆಡ್ಡಿ ತಾರಿಕೊಪ್ಪ ಪಾಲ್ಗೊಂಡಿದ್ದರು.

## ರಫಾ ನಿರಾಶ್ರಿತರ ಶಿಬಿರದ ಮೇಲೆ ದಾಳಿ ನಡೆಸಿದ ಇಸ್ರೇಲ್: 40 ಪ್ಯಾಲೆಸ್ತೀನಿಯರು ಸಾವು

■ವಿಜಯಸಾಕ್ಷಿ ಸುದ್ದಿ, ರಫಾ



ಇಸ್ರೇಲಿ ಪಡೆಗಳು ರಫಾದಲ್ಲಿ ವಿನ್ಯಾಸಗೊಳಿಸಲಾದ ಸುರಕ್ಷಿತ ವಲಯದಲ್ಲಿ ಸ್ಥಳಾಂತರಗೊಂಡ ಜನರು ವಾಸಿಸುವ ಟೆಂಟ್ ಕ್ಯಾಂಪ್ ಮೇಲೆ ಬಾಂಬ್ ದಾಳಿ ನಡೆಸಿದ್ದು, ಕನಿಷ್ಠ 40 ಪ್ಯಾಲೆಸ್ತೀನಿಯರು ಮೃತಪಟ್ಟಿದ್ದಾರೆ. ಬಲಿಯಾದವರಲ್ಲಿ ಹೆಚ್ಚಿನವರು ಮಹಿಳೆಯರು ಮತ್ತು ಮಕ್ಕಳು ಎಂದು ಅಲ್ ಜಝೀರಾ ವರದಿ ಮಾಡಿದೆ.


ಪ್ಯಾಲೆಸ್ತೀನ್ ಅಧಿಕಾರಿಗಳ ಪ್ರಕಾರ, ಕಳೆದ 24 ಗಂಟೆಗಳಲ್ಲಿ ಇಸ್ರೇಲಿ ಪಡೆಗಳು ತಾಲ್ ಅಸ್-ಸುಲ್ತಾನ್, ಜಬಾಲಿಯಾ, ನುಸೆರಾತ್ ಮತ್ತು ಗಾಜಾ ನಗರ ಸೇರಿದಂತೆ ಹಲವೆಡೆ ಸ್ಥಳಾಂತರಗೊಂಡ ಪ್ಯಾಲೆಸ್ತೀನಿಯರ ಆಶ್ರಯಗಳ ತಾಣಗಳ ಮೇಲೆ ಬಾಂಬ್ ದಾಳಿ ನಡೆಸಿದ್ದು, ಕನಿಷ್ಠ 160 ಮಂದಿ ಸಾವನ್ನಪ್ಪಿದ್ದಾರೆ.

ಇಸ್ರೇಲಿ ಸೇನೆಯು ದಾಳಿಯನ್ನು ದೃಢಪಡಿಸಿದ್ದು, ಹಮಾಸ್ ಅನ್ನು ಗುರಿಯಾಗಿಸಿ ದಾಳಿ ಮಾಡಲಾಗಿದೆ. ಈ ವೇಳೆ ಬೆಂಕಿಯಿಂದ ನಾಗರಿಕರು ಗಾಯಗೊಂಡಿದ್ದಾರೆ. ಈ ಬಗ್ಗೆ ತನಿಖೆ ನಡೆಯುತ್ತಿದೆ ಎಂದಿದೆ.

ಅಕ್ಟೋಬರ್ 7,2023ರಿಂದ ಗಾಝಾದಲ್ಲಿ ಇಸ್ರೇಲ್ ನಡೆಸುತ್ತಿರುವ ಆಕ್ರಮಣದಲ್ಲಿ ಇದುವರೆಗೆ ಸುಮಾರು 35,984 ಪ್ಯಾಲೆಸ್ತೀನಿಯರು ಕೊಲ್ಲಲ್ಪಟ್ಟಿದ್ದಾರೆ ಮತ್ತು 80,643 ಜನರು ಗಾಯಗೊಂಡಿದ್ದಾರೆ.

## ಭಯೋತ್ಪಾದಕರ ಕುಟುಂಬ ಸದಸ್ಯರಿಗೆ, ಕಲ್ಲು ತೂರಾಟಗಾರರಿಗೆ ಸರ್ಕಾರಿ ನೌಕರಿ ಸಿಗುವುದಿಲ್ಲ

■ವಿಜಯಸಾಕ್ಷಿ ಸುದ್ದಿ, ಜಮ್ಮು-ಕಾಶ್ಮೀರ



ಜಮ್ಮು-ಕಾಶ್ಮೀರದಲ್ಲಿ ಯಾವುದೇ ಭಯೋತ್ಪಾದಕರ ಕುಟುಂಬದ ಸದಸ್ಯರಿಗೆ ಅಥವಾ ಕಲ್ಲು ತೂರಾಟಗಾರರ ನಿಕಟ ಸಂಬಂಧಿಗಳಿಗೆ ಸರ್ಕಾರಿ ಉದ್ಯೋಗ ಸಿಗುವುದಿಲ್ಲ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಕಠಿಣ ಸಂದೇಶವನ್ನು ಕಳುಹಿಸಿದ್ದಾರೆ.

ನರೇಂದ್ರ ಮೋದಿ ಸರ್ಕಾರವು ಭಯೋತ್ಪಾದಕರನ್ನು ಗುರಿಯಾಗಿಸಿಕೊಂಡಿದೆ ಮಾತ್ರವಲ್ಲದೆ ಭಯೋತ್ಪಾದಕ ಪರಿಸರ ವ್ಯವಸ್ಥೆಯನ್ನು ನಿರ್ಮೂಲನೆ ಮಾಡಿದೆ, ಇದರ ಪರಿಣಾಮವಾಗಿ ದೇಶದಲ್ಲಿ ಭಯೋತ್ಪಾದಕ ಘಟನೆಗಳು ತೀವ್ರವಾಗಿ ಕುಸಿದಿವೆ ಎಂದು ಶಾ ಹೇಳಿದರು.

"ಕಾಶ್ಮೀರದಲ್ಲಿ, ಯಾರಾದರೂ ಭಯೋತ್ಪಾದಕ ಸಂಘಟನೆಗೆ ಸೇರಿದರೆ, ಅವರ ಕುಟುಂಬದ ಸದಸ್ಯರಿಗೆ ಯಾವುದೇ ಸರ್ಕಾರಿ ಉದ್ಯೋಗ ಸಿಗುವುದಿಲ್ಲ ಎಂಬ ನಿರ್ಧಾರವನ್ನು ನಾವು ತೆಗೆದುಕೊಂಡಿದ್ದೇವೆ" ಎಂದು ಅವರು ವಾರಾಂತ್ಯದಲ್ಲಿ ಖಾಸಗಿ ವಾಹಿನಿಗೆ ನೀಡಿದ ಸಂದರ್ಶನದಲ್ಲಿ ಹೇಳಿದರು.

ಅದೇ ರೀತಿ ಯಾರಾದರೂ ಕಲ್ಲು ತೂರಾಟದಲ್ಲಿ ತೊಡಗಿದರೆ ಅವರ ಕುಟುಂಬದ ಸದಸ್ಯರಿಗೂ ಸರ್ಕಾರಿ ಕೆಲಸ ಸಿಗುವುದಿಲ್ಲ ಎಂದು ಶಾ ಹೇಳಿದರು.

ಕೆಲವು ಮಾನವ ಹಕ್ಕುಗಳ ಕಾರ್ಯಕರ್ತರು ಈ ನಿರ್ಧಾರದ ವಿರುದ್ಧ ಸುಪ್ರೀಂ ಕೋರ್ಟ್‌ಗೆ ಹೋದರು. ಆದರೆ, ಅಂತಿಮವಾಗಿ ಸರ್ಕಾರವು ಮೇಲುಗೈ ಸಾಧಿಸಿತು. ಆದಾಗ್ಯೂ, ಕುಟುಂಬದಿಂದ ಯಾರಾದರೂ ಮುಂದೆ ಬಂದು ತನ್ನ ಹತ್ತಿರದ ಸಂಬಂಧಿ ಭಯೋತ್ಪಾದಕ ಸಂಘಟನೆಗೆ ಸೇರಿದ್ದಾರೆ ಎಂದು ಅಧಿಕಾರಿಗಳಿಗೆ ತಿಳಿಸಿದರೆ ಸರ್ಕಾರವು ವಿನಾಯಿತಿ ನೀಡುತ್ತದೆ; ಅಂತಹ ಕುಟುಂಬಗಳಿಗೆ ಪರಿಹಾರ ನೀಡಲಾಗುವುದು ಎಂದರು.

## 'ಕಾಂಗ್ರೆಸ್ ನಾಯಕರ ಅಪಪ್ರಚಾರದಿಂದ ಖಿನ್ನತೆಗೆ ಒಳಗಾಗಿದ್ದೆ'; ಅಜ್ಞಾತ ಸ್ಥಳದಿಂದ ವಿಡಿಯೊ ಹರಿಬಿಟ್ಟ ಪ್ರಜ್ವಲ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ತನ್ನ ಅಶ್ಲೀಲ ವಿಡಿಯೊ ಮತ್ತು ಲೈಂಗಿಕ ದೌರ್ಜನ್ಯದ ಕುರಿತು ರಾಜ್ಯ ಸರ್ಕಾರ ತನಿಖೆಗೆ ಆದೇಶಿಸುತ್ತಿದ್ದಂತೆಯೇ ವಿದೇಶಕ್ಕೆ ಪಲಾಯನ ಮಾಡಿರುವ ಹಾಸನ ಸಂಸದ, ಎನ್‌ಡಿಎ ಎಂಪಿ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಒಂದು ತಿಂಗಳ ಬಳಿಕ ಅಜ್ಞಾತ ಸ್ಥಳದಿಂದ ವಿಡಿಯೊ ಬಿಡುಗಡೆ ಮಾಡಿದ್ದಾರೆ. ಸದ್ಯಕ್ಕೆ ವಿದೇಶದಲ್ಲಿರುವ ಅವರು, 'ಕಾಂಗ್ರೆಸ್ ನಾಯಕರ ಅಪಪ್ರಚಾರದಿಂದ ಖಿನ್ನತೆಗೆ ಒಳಗಾಗಿದ್ದೆ..' ಎಂದು ಹೇಳಿದ್ದಾರೆ.

"ಮೊದಲಿಗೆ ನನ್ನ ತಂದೆ-ತಾಯಿ ಹಾಗೂ ತಾತನಿಗೆ, ನನ್ನ ಕುಮಾರಣ್ಣ, ನಾಡಿನ ಜನತೆ ಹಾಗೂ ಪಕ್ಷದ ಎಲ್ಲ ಕಾರ್ಯಕರ್ತರಿಗೆ ಕ್ಷಮೆ ಕೇಳುತ್ತೇನೆ" ಎಂದು ಮಾತು ಆರಂಭಿಸಿದ್ದಾರೆ.

"ನಾನು 27ಕ್ಕೆ ದೇಶ ಬಿಟ್ಟಾಗ ನನ್ನ ಮೇಲೆ ಯಾವುದೇ ಪ್ರಕರಣ ದಾಖಲಾಗಿರಲಿಲ್ಲ. ನಾನು ಫಾರಿನ್‌ನಲ್ಲಿ ಎಲ್ಲಿದ್ದೇನೆ ಎಂದು ಮಾಹಿತಿ ಕೊಡದಿರುವುದಕ್ಕೆ ಖಂಡಿತವಾಗಿಯೂ ಕ್ಷಮೆ ಕೇಳುತ್ತೇನೆ. ನಾನು ಮತದಾನ ಮಾಡಿ ವಿದೇಶಕ್ಕೆ ಹೋಗುವ ದಿನ ನನ್ನ ಮೇಲೆ ಯಾವುದೇ ಪ್ರಕರಣವೂ ದಾಖಲಾಗಿರಲಿಲ್ಲ. ಎಸ್‌ಐಟಿ ಕೂಡ ರಚನೆ ಆಗಿರಲಿಲ್ಲ. ಏ.26ರಂದು ನಾನು ವಿದೇಶಕ್ಕೆ ಹೋಗುವುದು ಕೂಡ ಪೂರ್ವ ನಿರ್ಧರಿತವಾಗಿರುತ್ತದೆ. ಮೂರ್ನಾಲ್ಕು ದಿನದ ಬಳಿಕ ಯೂಟ್ಯೂಬ್‌ನಲ್ಲಿ ನ್ಯೂಸ್ ಚಾನೆಲ್ ನೋಡುವ ವೇಳೆ ಈ ಮಾಹಿತಿ ನನಗೆ ತಿಳಿದುಬಂದಿತು. ಇದಾದ ನಂತರ ಎಸ್‌ಐಟಿ ಕೂಡ ನನಗೆ ನೋಟಿಸ್ ಕೊಡುವ ಕೆಲಸ ಮಾಡಿತು. ಎಸ್‌ಐಟಿ ನೋಟಿಸ್‌ಗೆ ಎಕ್ಸ್ ಖಾತೆ ಮತ್ತು ನಮ್ಮ ಲಾಯರ್ ಮೂಲಕ ವಿಚಾರಣೆಗೆ ಹಾಜರಾಜಲು 7 ದಿನಗಳ ಕಾಲಾವಕಾಶ ಕೇಳಿದ್ದೆನು" ಎಂದಿದ್ದಾರೆ.

### ವಿದ್ಯಾರ್ಥಿಗಳ ಪುನರ್ಮಿಲನ ಕಾರ್ಯಕ್ರಮದಲ್ಲಿ ಡಾ. ಡಿ.ಎಲ್. ಪಾಟೀಲ

# ಹಳೆಯ ಶಿಕ್ಷಕರು 24 ಕ್ಯಾರೆಟ್ ಚಿನ್ನವಿದ್ದಂತೆ

**■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಗುರುಗಳ ವಾಕ್ಯವನ್ನು ಪಾಲಿಸಿದ ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಕ್ಷೇತ್ರದಲ್ಲಿ ಅಮೋಘವಾದ ಸಾಧನೆ ಮಾಡಿ ಈ ಸಮಾಜದಲ್ಲಿ ಗುರುತಿಸಿಕೊಂಡಿದ್ದಾನೆ. ಅಂತಹ ಗುರುಗಳನ್ನು ಗೌರವಿಸುವ ಈ ಗುರುವಂದನಾ ಕಾರ್ಯಕ್ರಮ ಸ್ತುತ್ಯಾರ್ಹವಾಗಿದೆ ಎಂದು ಗದಗ ವಿದ್ಯಾದಾನ ಸಮಿತಿಯ ಪದವಿಪೂರ್ವ ಮಹಾವಿದ್ಯಾಲಯದ ಉಪನ್ಯಾಸಕ ಡಾ. ಡಿ.ಎಲ್. ಪಾಟೀಲ ಅಭಿಪ್ರಾಯಪಟ್ಟರು.

ಇಲ್ಲಿಯ ಜನತಾ ವಿದ್ಯಾವರ್ಧಕ ಸಂಸ್ಥೆಯ ಬಿ.ಎಚ್. ಪಾಟೀಲ ಪ.ಪೂ ಕಾಲೇಜು ಸಭಾಭವನದಲ್ಲಿ 1978-80ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿ ಬಳಗವು ಹಮ್ಮಿಕೊಂಡಿದ್ದ ಗುರುವಂದನಾ ಕಾರ್ಯಕ್ರಮ ಹಾಗೂ ಪುನರ್ಮಿಲನ ಸಮಾರಂಭದಲ್ಲಿ ಅವರು ಮಾತನಾಡಿದರು.

ಹಳೆಯ ಶಿಕ್ಷಕರು 24 ಕ್ಯಾರೆಟ್ ಚಿನ್ನವಿದ್ದಂತೆ. ಆ ಕಾಲದ ಶಿಕ್ಷಕರು ತಮ್ಮಲ್ಲಿಯ ವಿದ್ವತ್ತನ್ನು ತಮ್ಮ ಶಿಷ್ಯ ಬಳಗಕ್ಕೆ ಧಾರೆ ಎರೆಯಲು ಶ್ರಮಿಸುತ್ತಿದ್ದರು. ಅವರ, ಕಾಳಜಿ, ಪ್ರೀತಿ, ಸಂಬಂಧಗಳು ಪ್ರತಿಯೊಬ್ಬ ವಿದ್ಯಾರ್ಥಿಗಳ ಮೇಲೆ ಪರಿಣಾಮ ಬೀರುತ್ತಿದ್ದವು.




ಅಂದಿನ ಪ್ರಾಥಮಿಕ, ಮತ್ತು ಪ್ರೌಢಶಾಲೆಯಲ್ಲಿ ಹಾಕಿದ ಭದ್ರ ಬುನಾದಿಯೇ ಇಂದು ತಾವುಗಳೆಲ್ಲರೂ ಉತ್ತಮ ಹುದ್ದೆಯನ್ನು ಅಲಂಕರಿಸಲು ಸಾಧ್ಯವಾಗಿದೆ. ಅವರ ಆದರ್ಶ ಗುಣಗಳೇ ಇಂದು ತಾವೆಲ್ಲರೂ ಸೇರಿ 44 ವರ್ಷದ ನನೆಪನ್ನು ಮತ್ತೆ ಪುನರ್ಮಿಲನ ಆಗುವಂತೆ ಮಾಡಿದ್ದು ತಮ್ಮೆಲ್ಲರ ಉತ್ತಮ ಭವಿಷ್ಯ ನಿರ್ಮಾಣಕ್ಕೆ ಕಾರಣರಾದ ಶಿಕ್ಷಕರಿಗೆ ಗುರುವಂದನೆ ಸಲ್ಲಿಸುತ್ತಿರುವುದು ಶ್ಲಾಘನೀಯ ಎಂದರು.

ಜನತಾ ವಿದ್ಯಾವರ್ಧಕ ಸಂಸ್ಥೆಯ ಅಧ್ಯಕ್ಷ ಐ.ಎನ್. ಕುಂಬಾರ ಮತ್ತು ನಿರ್ದೇಶಕ ವಿ.ವಿ. ಗಂಧದ ಮಾತನಾಡಿ, ಆರೋಗ್ಯವಂತ ಸಮಾಜ ನಿರ್ಮಾಣದ ಹಿಂದೆ ತಂದೆ-ತಾಯಿ, ಗುರುವಿನ ಪಾತ್ರ ದೊಡ್ಡದಾಗಿದೆ. ತಮ್ಮನ್ನು ವಿದ್ಯಾವಂತರನ್ನಾಗಿ ಮಾಡಿ ಭವಿಷ್ಯ ರೂಪಿಸಲು ಕಾರಣರಾದ ಶಿಕ್ಷಕರನ್ನು ಗುರುತಿಸಿ ಗೌರವ ಸಲ್ಲಿಸುವ ಈ ಸಂಪ್ರದಾಯ ಬೆಳೆಯಬೇಕಾಗಿದ್ದು, ಈ ಸಂಸ್ಥೆಯಲ್ಲಿ ಕಲಿತ ವಿದ್ಯಾರ್ಥಿಗಳು ಸಹಾಯ-ಸಹಕಾರ ನೀಡಿ ಸಂಸ್ಥೆಯ ಅಭಿವೃದ್ಧಿಗೆ ಸಹಕಾರಿಯಾಗಬೇಕು ಎಂದು ವಿನಂತಿಸಿಕೊಂಡರು.

ಸಂಸ್ಥೆಯ ಉಪಾಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ನಿವೃತ್ತ ಶಿಕ್ಷಕರಾದ ಯು.ಎಸ್. ಬೆಂತೂರ, ವಿ.ಆಯ್. ಬಡಿಗೇರ, ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಪ್ರಾಚಾರ್ಯ ಬಿ.ವಿ. ಪಾಟೀಲ, ನಾಗರಾಜ ಕುಲಕರ್ಣಿ ಮಾತನಾಡಿದರು.

ಪ್ರೇಮಾ ದೇಶಪಾಂಡೆ, ಸಂಧ್ಯಾ ಹೆಬಸೂರು ಪ್ರಾರ್ಥಿಸಿದರು. ಅಬ್ದುಲ್‌ರಜಾಕ ಯರಗುಡಿ ಸ್ವಾಗತಿಸಿದರು. ಬಸವರಾಜ ಹಡಗಲಿ ವಂದಿಸಿದರು.

### ಪುನರ್ಮಿಲನದ ಸಂತಸದ ಕ್ಷಣ

35ಕ್ಕೂ ಹೆಚ್ಚು ಹಳೆಯ ವಿದ್ಯಾರ್ಥಿಗಳು ತಮ್ಮ ಕಲಿಸಿದ ಶಿಕ್ಷಕರಾದ ವಿ.ಆಯ್. ಬಡಿಗೇರ ಹಾಗೂ ಯು.ಎಸ್. ಬೆಂತೂರ ಅವರನ್ನು ಸನ್ಮಾನಿಸಿ ಗುರು ಕಾಣಿಕೆ ನೀಡಿ ಗೌರವ ಅರ್ಪಿಸಿದ ಕ್ಷಣವು ಎಲ್ಲರಲ್ಲಿಯೂ ಸಂತಸದ ಚಿಲುಮೆ ಉಕ್ಕಿಸಿತು. ಇನ್ನುಳಿದ ಶಿಕ್ಷಕರು ಪಂಚಭೂತಗಳಲ್ಲಿ ಲೀನವಾಗಿದ್ದಾರೆ. ಈ ಶಿಕ್ಷಕರನ್ನು ಸ್ಮರಿಸಿ ಅವರಿಗೆ ಒಂದು ನಿಮಿಷ ಮೌನ ಆಚರಿಸಿ ಶೃದ್ಧಾಂಜಲಿ ಮೂಲಕ ಗೌರವ ಸಮರ್ಪಿಸಿದ್ದು ವಿಶೇಷವಾಗಿತ್ತು. ಅಂದಿನ ವಿದ್ಯಾರ್ಥಿ ಕ್ಷಣಗಳನ್ನು ಹಂಚಿಕೊಳ್ಳುವ ಸಂದರ್ಭದಲ್ಲಿ ಕಣ್ಣಲ್ಲಿ ಆನಂದ ಭಾಷ್ಪಗಳು ಉದುರಿದವು. ಒಬ್ಬರಿಗೊಬ್ಬರು ಕೈ ಕುಲಕಿ ಸಂತಸ ಪಟ್ಟರು. ಶಿಕ್ಷಕರ ಕಾಲು ಮುಗಿದು ಧನ್ಯತಾ ಭಾವ ಮೆರೆದರು.

## ಎನ್.ಎಮ್.ಎಮ್.ಎಸ್ ಶಿಷ್ಯವೇತನಕ್ಕೆ ಆಯ್ಕೆ



**■ ವಿಜಯಸಾಕ್ಷಿ ಸುದ್ದಿ, ನರೇಗಲ್**

ಸಮೀಪದ ಅಬ್ಬಿಗೇರಿ ಗ್ರಾಮದ ಶ್ರೀ ಅನ್ನದಾನ ವಿಜಯ ಪ್ರೌಢಶಾಲೆಯ ವಿದ್ಯಾರ್ಥಿಗಳಾದ ಪ್ರಶಾಂತ ಮುಗಳಿ, ಭುವನ ಶಿವಶಿಂಪರ, ಕಲ್ಲಯ್ಯ ಮಠಪತಿ, ಚನ್ನಗಿರಿ ಗೋಸಾವಿ, ಪ್ರತಾಪ ಬಂಡಿಹಾಳ, ಪ್ರಜ್ವಲ್ ಕಮ್ಮಾರ, ಶಾಂಭವಿ ಕಮ್ಮಾರ, ಕೀರ್ತಿ ಗೌಡರ ಇವರು ರಾಷ್ಟ್ರೀಯ ಮೆರಿಟ್ ಕಮ್ ಮೀನ್ಸ್ ಶಿಷ್ಯವೇತನಕ್ಕೆ ಆಯ್ಕೆಯಾಗಿ ಶಾಲೆಗೆ ಕೀರ್ತಿ ತಂದಿದ್ದಾರೆ ಎಂದು ಮುಖ್ಯ ಶಿಕ್ಷಕ ಸಜ್ಜನ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿದ ಸಿಬ್ಬಂದಿಯವರಿಗೆ ಹಾಗೂ ರಾಕೇಶ ನಡವಲಗುಡ್ಡ ಅವರಿಗೆ ಸಂಸ್ಥೆಯ ಅಧ್ಯಕ್ಷರಾದ ಪರಮ ಪೂಜ್ಯ ಹಾಲಕೆರೆಯ ಮುಪ್ಪಿನ ಬಸವಲಿಂಗ ಸ್ವಾಮೀಜಿ, ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಎನ್.ಆರ್. ಗೌಡರ, ಚೇರಮನ್ ಡಾ. ಆರ್.ಬಿ. ಬಸವರಡ್ಡೇರ, ಶಾಲಾ ಆಡಳಿತ ಮಂಡಳಿ ಸದಸ್ಯರು, ಮುಖ್ಯೋಪಾಧ್ಯಾಯರು ಹಾಗೂ ಸಿಬ್ಬಂದಿ ವರ್ಗದವರು ಅಭಿನಂದನೆಗಳನ್ನು ತಿಳಿಸಿದ್ದಾರೆ.

## ಶ್ರೀ ವೆಂಕಟೇಶ್ವರ ದೇವಸ್ಥಾನದ ವಾರ್ಷಿಕೋತ್ಸವ



**■ ವಿಜಯಸಾಕ್ಷಿ ಸುದ್ದಿ, ಗದಗ**

ಹಿಂದೂ ಸವಿತಾ ಸಮಾಜ, ಬೆಟಗೇರಿಯ ರಂಗಾವಧೂತರ ತಪೋಭೂಮಿಯಲ್ಲಿರುವ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ 26ನೇ ವರ್ಷದ ವಾರ್ಷಿಕೋತ್ಸವ ಕಾರ್ಯಕ್ರಮವು ವಿಜೃಂಭಣೆಯಿಂದ ನೆರವೇರಿತು.

ದೇವಸ್ಥಾನದ ಶ್ರೀಲಕ್ಷ್ಮೀ ವೆಂಕಟೇಶ್ವರ ಕಲ್ಯಾಣ ಮಂಟಪದ ಅಭಿವೃದ್ಧಿ ಕಾರ್ಯಕ್ಕೆ ಸಮಾಜದ ಬಂಧುಗಳು ದೇಣಿಗೆಯನ್ನು ನೀಡಿದರು. ದೇಣಿಗೆ ನೀಡಿದ ದಾನಿಗಳಿಗೆ ಟ್ರಸ್ಟ್ ಕಮಿಟಿ ಅಧ್ಯಕ್ಷ ಸಣ್ಣಗಂಗಣ್ಣ ನಾ.ಗೌಡರ, ಪದಾಧಿಕಾರಿಗಳು ಹಾಗೂ ಸಮಾಜ ಹಿರಿಯರಾದ ದೇವೇಂದ್ರಪ್ಪ ಮ.ರಾಂಪೂರ, ಮಲ್ಲೇಶಪ್ಪ ಮ. ರಾಂಪೂರ, ರಾಜು ನಾ.ಗೌಡರ, ಪಾಂಡು ಹ.ರಾಂಪೂರ, ಸತೀಶ ಹ.ರಾಂಪೂರ, ರಾಜು ತಿ.ರಾಂಪೂರ, ವೆಂಕಟೇಶ ದೇ. ರಾಂಪೂರ, ಮಧುರಾಜ್ ಮ.ರಾಂಪೂರ, ಯುವಕ ಮಂಡಳದ ಅಧ್ಯಕ್ಷ ಶ್ರೀಧರ ಮಾ.ರಘುನಾಥನಳ್ಳಿ, ಪದಾಧಿಕಾರಿಗಳಾದ ಅಣ್ಣಪ್ಪ ದೇ.ರಾಂಪೂರ, ಮಂಜುನಾಥ ಗೌಡರ, ಹರೀಶ ರಾಂಪೂರ, ರಾಘವೇಂದ್ರ ಗೌಡರ, ನಾಗೇಶ ರಾಂಪೂರ, ರಾಘವೇಂದ್ರ ರಾಂಪೂರ, ಮಂಜುನಾಥ ರಾಂಪೂರ ಮತ್ತು ಸಮಾಜದ ಸರ್ವ ಬಾಂಧವರು ಸತ್ಕರಿಸಿ ಕೃತಜ್ಞತೆ ಸಲ್ಲಿಸಿದರು.

# ಬಿತ್ತನೆ ಬೀಜ ಮಾರಾಟ ಪ್ರಾರಂಭ

**■ ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮುಂಗಾರು ಹಂಗಾಮಿನ ರಿಯಾಯಿತಿ ದರದ ಬಿತ್ತನೆ ಬೀಜ ಮಾರಾಟವನ್ನು ಹುಲಕೋಟಿ ಕೃಷಿ ಕೇಂದ್ರದ ಕೃಷಿ ಅಧಿಕಾರಿ ರಾಜೇಶ್ವರಿ ಚಿನಿವಾಲರ ಹಾಗೂ ಮುಳಗುಂದ ರೈತ ಸಂಘದ ಸರ್ವ ಸದಸ್ಯರು ಹೆಸರು ಬೀಜಗಳನ್ನು ರೈತರಿಗೆ ವಿತರಣೆ ಪ್ರಾರಂಭಿಸಿದರು.



ರೈತ ಸಂಘದ ಅಧ್ಯಕ್ಷ ಬಸವರಾಜ ಕರಿಗಾರ, ದೇವರಾಜ ಸಂಗನಪೇಟಿ, ಗುಡುಸಾಬ ಗಾಡಿ, ಶಂಕ್ರಯ್ಯ ಹಿರೇಮಠ, ಕೀರಣ ಕುಲಕರ್ಣಿ ಮಮ್ಮದಲಿ ಶೇಖ, ದೇವಪ್ಪ ಅಣ್ಣಿಗೇರಿ, ಬಸವರಾಜ ಕೊಟಗಿ, ಶರಣಪ್ಪ ಚಳ್ಳಣ್ಣವರ, ಮಂಜುನಾಥ ಮಳ್ಳಿ, ಕಾಶೀಮಸಾಬ ಹಾದಿಮನಿ, ಮಂಜುನಾಥ ಹಾಗೂ ರೈತ ಮಹಿಳೆಯರು ಇದ್ದರು.

## ಎಂ.ಎಸ್. ಕುಲಕರ್ಣಿ ಸ್ನೇಹ ಜೀವಿಯಾಗಿದ್ದರು



**■ ವಿಜಯಸಾಕ್ಷಿ ಸುದ್ದಿ, ನರೇಗಲ್**

ನಿವೃತ್ತ ಉಪನ್ಯಾಸಕ ಎಂ.ಎಸ್. ಕುಲಕರ್ಣಿ ಸ್ನೇಹ ಜೀವಿಯಾಗಿದ್ದರು. ಎಲ್ಲರೊಂದಿಗೂ ಸಂತಸದಿಂದ ಬೆರೆಯುತ್ತಿದ್ದ ಅವರು, ತಮ್ಮ ವೈಯಕ್ತಿಕ ಸಮಸ್ಯೆಗಳನ್ನು ಯಾರೊಂದಿಗೂ ಹಂಚಿಕೊಂಡವರಲ್ಲ ಎಂದು ನಿವೃತ್ತ ಉಪನ್ಯಾಸಕ ಸುಭಾಸ ಸಂಕನೂರ ಹೇಳಿದರು.

ಪಟ್ಟಣದ ಹಿರೇಮಠದ ಸಭಾಭವನದಲ್ಲಿ ಜರುಗಿದ ನಿವೃತ್ತ ನೌಕರರು ಹಾಗೂ ಹಿರಿಯರ ಕ್ಷೇಮಾಭಿವೃದ್ಧಿ ಸಂಘದ ಮಾಸಿಕ ಸಭೆಯಲ್ಲಿ, ಶನಿವಾರ ನಿಧನರಾದ ಉಪನ್ಯಾಸಕ ಎಂ.ಎಸ್. ಕುಲಕರ್ಣಿಯವರಿಗೆ ಶೃದ್ಧಾಂಜಲಿ ಸಲ್ಲಿಸಿ ಮಾತನಾಡಿದರು.

ಮೂಲತಃ ಕೋಟುಮಚಗಿಯವರಾದ ಅವರು ಬಹಳಷ್ಟು ವರ್ಷಗಳ ಕಾಲ ರಾಣೇಬೆನ್ನೂರಿನಲ್ಲಿ ಸಲ್ಲಿಸಿ, ನಂತರ ನರೇಗಲ್ಲದ ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ತಮ್ಮ ಸೇವೆಯನ್ನು ಮುಂದುವರೆಸಿದ್ದರು. ತಮ್ಮ ಸೇವಾವಧಿಯಲ್ಲಿ ಕಾಲೇಜಿನಲ್ಲಿ ಅವರು ಎಲ್ಲರೊಂದಿಗೂ ಪ್ರೀತಿಯಿಂದ ಬೆರೆತು ಸ್ನೇಹದ ಸವಿಯನ್ನು ಹಂಚುವ ಮೂಲಕ ತಮ್ಮ ಛಾಪನ್ನು ಮೂಡಿಸಿ ಹೋಗಿದ್ದಾರೆ ಎಂದು ಸಂಕನೂರ ಹೇಳಿದರು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಮಾತನಾಡಿ, ಉಪನ್ಯಾಸಕ ಕುಲಕರ್ಣಿ ವೃತ್ತಿಯೊಂದಿಗೆ ಸಾಂಸ್ಕೃತಿಕ ರಾಯಭಾರಿಯೂ ಆಗಿದ್ದರು. ನರೇಗಲ್ಲದಲ್ಲಿ ಸಹಸ್ರ ಚಂಡಿಕಾ ಮಹಾ ಯಾಗ ನಡೆದ ಸಂದರ್ಭದಲ್ಲಿ ಗದಗಿನ ಆರ್‌ಎನ್‌ಕೆ ಮಿತ್ರ ಮಂಡಳಿಯ ವತಿಯಿಂದ ಅಭಿನಯಿಸಿದ ನಾಟಕದಲ್ಲಿ ಕುಲಕರ್ಣಿ ಅಮೋಘ ಪ್ರದರ್ಶನ ನೀಡಿದ್ದರು ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಡಿ.ಎ. ಅರವಟಗಿಮಠ ಮಾತನಾಡಿ, ಎಂ.ಎಸ್. ಕುಲಕರ್ಣಿ ಸಾಂಸ್ಕೃತಿಕ ಕಾರ್ಯಕ್ರಮಗಳ ಬಗ್ಗೆ ಒಂದು ವಿಶೇಷವಾದ ಒಲವಿತ್ತು. ಅವರನ್ನು ಕಳೆದುಕೊಂಡ ನನಗೆ ನಿಜಕ್ಕೂ ಒಬ್ಬ ಸನ್ಮಿತ್ರರನ್ನು ಕಳೆದುಕೊಂಡ ಅನಾಥ ಭಾವ ಕಾಡುತ್ತಿದೆ ಎಂದರು.

ಒಂದು ನಿಮಿಷದ ಮೌನಾಚರಣೆಯ ಮೂಲಕ ಅಗಲಿದ ಚೇತನಕ್ಕೆ ಶೃದ್ಧಾಂಜಲಿ ಅರ್ಪಿಸಲಾಯಿತು. ಸಭೆಯಲ್ಲಿ ಡಾ. ಆರ್. ಕೆ. ಗಚ್ಚಿನಮಠ, ನಿವೃತ್ತ ಶಿಕ್ಷಕ ಎಂ.ಎ. ಹಿರೇವಡೆಯರ, ಎಸ್.ಕೆ. ಪಾಟೀಲ, ಸಂಗನಾಳ, ವೀರಭದ್ರಪ್ಪ ಕೆರಿಯವರ, ಶಿವಯ್ಯ ಹಿರೇಮಠ, ಅಂದಪ್ಪ ಹಕ್ಕಿ ಮುಂತಾದವರು ಪಾಲ್ಗೊಂಡಿದ್ದರು.

# 'ರುದ್ರಾಭಿಷೇಕಂ' ಚಲನಚಿತ್ರಕ್ಕೆ ಮುಹೂರ್ತ



**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಪ್ಯಾನ್ ಇಂಡಿಯಾ ಕ್ರಿಯೇಷನ್ಸ್ ವಿಜಯಪುರವರ ಪ್ರಥಮ ಕಾಣಿಕೆ 'ರುದ್ರಾಭಿಷೇಕಂ' ಕನ್ನಡ ಮತ್ತು ತೆಲುಗು ದ್ವಿಭಾಷೆಯಲ್ಲಿ ನಿರ್ಮಾಣವಾಗುತ್ತಿರುವ ಚಿತ್ರ ಚಿತ್ರೀಕರಣದ ಮುಹೂರ್ತ ಸಮಾರಂಭ ಬೆಂಗಳೂರಿನಲ್ಲಿ ಅದ್ದೂರಿಯಾಗಿ ನೆರವೇರಿತು.

ಬಿವಿಕೆ ಗ್ರೂಪ್‌ನ ಕೃಷ್ಣಪ್ಪನವರು ಕ್ಲಾಪ್ ಮಾಡಿದರೆ, ವಿಜಯಪುರದ ಬಸವಕಲ್ಯಾಣಮಠದ ಶ್ರೀ ಮಾದೇವಶ್ರೀಗಳು ಕ್ಯಾಮರಾ ಗುಂಡಿ ಒತ್ತುವ ಮೂಲಕ ಮೊದಲ ದೃಶ್ಯಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ದೊಡ್ಡಬಳ್ಳಾಪುರದ ನಿರಂಜನ ಶ್ರೀಗಳು, ಸಿದ್ದಗಂಗಾಮಠದ ನಿರಂಜನ ಶ್ರೀಗಳು, ಚಲನಚಿತ್ರರಂಗದ ಗಣ್ಯರು, ನಿರ್ಮಾಪಕರು, ಕಲಾವಿದರು, ತಂತ್ರಜ್ಞರು ಪಾಲ್ಗೊಂಡು ಚಿತ್ರಕ್ಕೆ ಶುಭಕೋರಿದರು.

ದಕ್ಷಿಣ ಭಾರತದ ಹೆಸರಾಂತ ಜನಪದ ಕಲೆಯನ್ನು ಒಳಗೊಂಡಿರುವ ಪ್ರಚಲಿತವಾಗಿರುವ ಕಥೆ ಇದು. ದೇವನಹಳ್ಳಿ ಸುತ್ತಮುತ್ತ, ನಂದಿಬೆಟ್ಟ, ಸಕಲೇಶಪುರ, ಮಲ್ಪೆ ಬೀಚ್ ಮೊದಲಾದ ಕಡೆ ಒಂದೇ ಹಂತದಲ್ಲಿ ಚಿತ್ರೀಕರಣ ನಡೆಯಲಿದೆ ಎಂದು ನಿರ್ದೇಶಕ ಕೆ.ವಸಂತ್ ಕುಮಾರ್ ತಿಳಿಸಿದರು.

ನಾಯಕ ನಟನಾಗಿ ಸನತ್, ಶ್ರೀದೇವಿ ಜೋಶಿ ನಾಯಕಿಯಾಗಿ, ಖಳನಾಯ ಕರುಗಳಾಗಿ ಬುಲೆಟ್‌ವಿನ್, ಮನು, ಮುಕುಂದ್, ವಿಜಯರಾಜ್ ಹಾಗೂ ವಿಶಿಷ್ಟ ಪಾತ್ರದಲ್ಲಿ ಖ್ಯಾತ ಜನಪದ ದಿಗ್ಗಜ ಗುರುರಾಜ್ ಹೊಸಕೋಟೆ ಇವರೊಂದಿಗೆ ಶಂಖನಾದ ಆಂಜಿನಪ್ಪ, ಬಿರಾದಾರ್, ಮಾಲತಿಶ್ರೀ, ಮಮತಾ, ಅಲೀಷಾ ಮೊದಲಾದವರು ಚಿತ್ರದಲ್ಲಿದ್ದಾರೆ.

ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ ಮುತ್ತುರಾಜ್, ವಿ.ಮನೋಹರ್ ಸಂಗೀತ ಚಿತ್ರಕ್ಕಿದೆ. ಸುರೇಶ್ ಗುಟ್ಟಹಳ್ಳಿ ನೃತ್ಯ ಸಂಯೋಜನೆ, ಬಾಬುಖಾನ್ ಕಲಾ ನಿರ್ದೇಶನ, ಮೇಕಪ್ ರಾಜ್, ವಸ್ತ್ರಾಲಂಕಾರ ವಿಜಯಕುಮಾರ್, ಸಂಕಲನ ಮುತ್ತುರಾಜ್ ಟಿ, ಪಿಆರ್‌ಓ ಡಾ. ಪ್ರಭು.ಗಂಜಿಹಾಳ, ಡಾ.ವೀರೇಶ್ ಹಂಡಿಗಿ, ಸಹ ನಿರ್ದೇಶನ ಕಾಳಿದಾಸ ಅವರದ್ದಿದೆ. ಕೆ.ವಸಂತ್ ಕುಮಾರ್ ಅವರು ಮೊದಲ ಸಲ ಚಿತ್ರ ನಿರ್ದೇಶನಕ್ಕಿಳಿದು ಅದೃಷ್ಟ ಪರೀಕ್ಷೆಗೆ ಹೊರಟಿದ್ದಾರೆ.

ವಕೀಲರಾದ ಎನ್ ಜಯರಾಮ್, ಬಿ.ಎ. ರಮೇಶ್, ಕೆ. ವೆಂಕಟೇಶ್, ಶಿವು, ಚಿದಾನಂದಮೂರ್ತಿ ಹಾಗೂ ಅವರ ಸ್ನೇಹಿತರುಗಳು ಚಿತ್ರವನ್ನು ನಿರ್ಮಿಸುತ್ತಿದ್ದಾರೆ.

## ಟಿಎಂಸಿ ವಿರುದ್ಧ ಅವಹೇಳನಕಾರಿ ಜಾಹೀರಾತು; ಬಿಜೆಪಿ ನಡೆಯನ್ನು ಟೀಕಿಸಿದ ಸುಪ್ರೀಂಕೋರ್ಟ್

**■ ವಿಜಯಸಾಕ್ಷಿ ಸುದ್ದಿ, ಪಶ್ಚಿಮ ಬಂಗಾಳ**




ಪಶ್ಚಿಮ ಬಂಗಾಳದ ಆಡಳಿತ ಪಕ್ಷವಾದ ತೃಣಮೂಲ ಕಾಂಗ್ರೆಸ್ (ಟಿಎಂಸಿ) ವಿರುದ್ಧ "ಅವಹೇಳನಕಾರಿ" ಎಂದು ಪರಿಗಣಿಸುವ ಜಾಹೀರಾತುಗಳನ್ನು ನೀಡಿದ್ದಕ್ಕಾಗಿ ಭಾರತೀಯ ಜನತಾ ಪಕ್ಷವನ್ನು (ಬಿಜೆಪಿ) ಸೋಮವಾರ ಕಟುವಾಗಿ ಟೀಕಿಸಿದ ಸುಪ್ರೀಂ ಕೋರ್ಟ್, ಜಾಹೀರಾತುಗಳನ್ನು ಪ್ರಕಟಿಸದಂತೆ ಬಿಜೆಪಿಗೆ ಕಲ್ಕತ್ತಾ ಹೈಕೋರ್ಟ್ ನೀಡಿರುವ ಆದೇಶದಲ್ಲಿ ಮಧ್ಯಪ್ರವೇಶಿಸಲು ನಿರಾಕರಿಸಿದೆ.

"ನಾವು ಜಾಹೀರಾತುಗಳನ್ನು ನೋಡಿದ್ದೇವೆ ಮತ್ತು ಅವುಗಳಲ್ಲಿ ಏನಿದೆ? ಮೊದಲ ನೋಟದಲ್ಲಿ ಈ ಜಾಹೀರಾತುಗಳು ಅವಹೇಳನಕಾರಿಯಾಗಿದೆ. ನೀವು ಉತ್ತಮರು ಎಂದು ನೀವು ಹೇಳಬಹುದು. ಆದರೆ, ಇತರರ ಬಗ್ಗೆ ನೀವು ಇತರ ಕೆಲವು ವಿಷಯಗಳನ್ನು ಹೇಳಲು ಸಾಧ್ಯವಿಲ್ಲ ಮತ್ತಷ್ಟು ಕ್ರೌರ್ಯವನ್ನು ಉತ್ತೇಜಿಸಲು ನಾವು ನಮ್ಮ ಕೈಗಳನ್ನು ಕೊಡಲು ಸಾಧ್ಯವಿಲ್ಲ" ಎಂದು ನ್ಯಾಯಮೂರ್ತಿಗಳಾದ ಜೆ.ಕೆ. ಮಹೇಶ್ವರಿ ಮತ್ತು ಕೆವಿ ವಿಶ್ವನಾಥನ್ ಅವರನ್ನು ಒಳಗೊಂಡ ರಜಾಕಾಲದ ಪೀಠ ಹೇಳಿದೆ.

ಚುನಾವಣಾ ಪ್ರಕ್ರಿಯೆಯಲ್ಲಿ ರಾಜಕೀಯ ಪಕ್ಷಗಳು ಸಮಗ್ರತೆ ಮತ್ತು ನಡವಳಿಕೆಯ ಅತ್ಯುನ್ನತ ಮಾನದಂಡಗಳಿಗೆ ಬದ್ಧವಾಗಿರಬೇಕು ಎಂದು ಪೀಠವು ಒತ್ತಿ ಹೇಳಿತು. "ಇದು (ವಿರೋಧಿಗಳನ್ನು ಕೆಣಕುವುದು) ಮತದಾರರ ಹಿತದೃಷ್ಟಿಯಿಂದ ಆಗುವುದಿಲ್ಲ. ಇದು ಚರ್ಚೆಯನ್ನು ಕೆಡಿಸುತ್ತದೆ" ಎಂದು ಬಿಜೆಪಿ ಪರ ಹಾಜರಾದ ಹಿರಿಯ ವಕೀಲ ಪಿಎಸ್ ಪಟ್ವಾಲಿಯಾ ಅವರಿಗೆ ಕೋರ್ಟ್ ಹೇಳಿದೆ.

ಕಲ್ಕತ್ತಾ ಹೈಕೋರ್ಟಿನ ಏಕಸದಸ್ಯ ಪೀಠವು ಮೇ 20 ರಂದು ನೀಡಿದ ತೀರ್ಪಿಗೆ ಪ್ರತಿಕ್ರಿಯೆಯಾಗಿ ನ್ಯಾಯಾಲಯದ ಹೇಳಿಕೆಗಳು ಬಂದವು, ಇದು ಲೋಕಸಭೆ ಚುನಾವಣೆಯ ಫಲಿತಾಂಶದ ದಿನವಾದ ಜೂನ್ 4 ರವರೆಗೆ ಟಿಎಂಸಿ ಮತ್ತು ಅದರ ಕಾರ್ಯಕರ್ತರ ವಿರುದ್ಧ ಆರೋಪಗಳನ್ನು ಒಳಗೊಂಡ ಕೆಲವು ಜಾಹೀರಾತುಗಳನ್ನು ಪ್ರಕಟಿಸದಂತೆ ಬಿಜೆಪಿಯನ್ನು ನಿರ್ಬಂಧಿಸಿದೆ.

### ನಿಧನ ವಾರ್ತೆ

**ಪ್ರೇಮಾ ಮುದಿಬಸನಗೌಡ್ರ**



ಗದಗ, 27. ನಗರದ ವಿವೇಕಾನಂದ ನಗರದ 1ನೇ ಕ್ರಾಸ್‌ನ ಕರಿಯಮ್ಮಕಲ್ಲ ಬಡಾವಣೆಯ ನಿವಾಸಿ ಪ್ರೇಮಾ ಮರಿಗೌಡ ಮುದಿಬಸನಗೌಡ್ರ (53) ರವಿವಾರ ನಿಧನರಾದರು. ಮೃತರು ಪತಿ, ಪುತ್ರಿ, ಇಬ್ಬರು ಪುತ್ರರು ಸೇರಿ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಮೇ 27ರಂದು ರೋಣ ತಾಲೂಕಿನ ಮುದೇನಗುಡಿ ಗ್ರಾಮದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

### ಪಂ. ಪುಟ್ಟರಾಜರ ಜನ್ಮದಿನವನ್ನು ಸರಕಾರದಿಂದ ಆಚರಿಸಲು ಒತ್ತಾಯ

# ಪುಟ್ಟರಾಜ ಸೇವಾ ಸಮಿತಿಯ ಹಾವೇರಿ ತಾಲೂಕಾ ಘಟಕದ ಉದ್ಘಾಟನೆ

**■ ವಿಜಯಸಾಕ್ಷಿ ಸುದ್ದಿ, ಹಾವೇರಿ**

ಗುರು ಪುಟ್ಟರಾಜರ ಜನ್ಮದಿನವನ್ನು ಸರಕಾರಿಂದ ಆಚರಿಸುವಂತಾಗಬೇಕು ಮತ್ತು ಪಂಡಿತ ಪುಟ್ಟರಾಜರ ಸಮಗ್ರ ಸಾಹಿತ್ಯವನ್ನು ಸರಕಾರವೇ ಪ್ರಕಟಿಸಬೇಕು. ಹಾವೇರಿಯಲ್ಲಿ ಸರ್ಕಾರದಿಂದಲೇ ಕುಮಾರ ಪಂಚಾಕ್ಷರಿ ಪುಟ್ಟರಾಜ ಟ್ರಸ್ಟ್ ಸ್ಥಾಪಿಸಬೇಕಾಗಿದೆ ಎಂದು ಗದುಗಿನ ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ ಸಂಸ್ಥಾಪಕ, ವೇ. ಚನ್ನವೀರಸ್ವಾಮಿ ಹಿರೇಮಠ (ಕಡಣಿ) ಸರಕಾರವನ್ನು ಒತ್ತಾಯಿಸಿದರು.

ಅವರು ನಗರದ ಶ್ರೀ ಹುಕ್ಕೇರಿಮಠದ ಅಕ್ಕನ ಬಳಗದ ಅಕ್ಕನ ಮಂದಿರದಲ್ಲಿ ಹಮ್ಮಿಕೊಳ್ಳಲಾಗಿದ್ದ ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ ಹಾವೇರಿ ತಾಲೂಕಾ ಘಟಕದ ಉದ್ಘಾಟನೆ ಮತ್ತು ಸೇವಾ ಸಮಿತಿಯ ಪದಾಧಿಕಾರಿಗಳಿಗೆ ಗುರು ಸೇವಾದೀಕ್ಷೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.




ಸೇವಾ ಸಮಿತಿಯ ತಾಲೂಕಾಧ್ಯಕ್ಷೆ ಚಂಪಾ ಮಲ್ಲಿಕಾರ್ಜುನ ಹುಣಸಿಕಟ್ಟಿ ಅಧ್ಯಕ್ಷತೆ ವಹಿಸಿದ್ದರು. ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಹಾವೇರಿ ಜಿಲ್ಲಾಧ್ಯಕ್ಷೆ ಡಾ. ಗೀತಾ ಸುತ್ತಕೋಟೆ, ಸಮಿತಿಯ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ದ್ರಾಕ್ಷಾಯಿಣಿ ವಾಲ್ಮಿಕಿ ಮತ್ತು ಶ್ರೀ ಹುಕ್ಕೇರಿಮಠ ಅಕ್ಕನ ಬಳಗದ ಗೌರವಾಧ್ಯಕ್ಷೆ ಲಲಿತಾಗಂಗಾಧರ ಹೊರಡಿ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಇದೇ ಸಂದರ್ಭದಲ್ಲಿ ಸೇವಾ ಸಮಿತಿಯ ಸಂಸ್ಥಾಪಕರು, ಕಾರ್ಯಕಾರಿ ಮಂಡಳಿ ಸದಸ್ಯರಿಗೆ ಗುರುಸೇವಾ ದೀಕ್ಷೆ ನೀಡಿ ಸತ್ಕರಿಸಲಾಯಿತು. ಅಂಧ ಕಲಾವಿದರುಗಳಾದ ಮಂಜುನಾಥ ಕಮ್ಮಾರ, ಸುರೇಶ ಅಂಗಡಿ ಇವರನ್ನು ಸತ್ಕರಿಸಲಾಯಿತು.

ಸಭಾ ಕಾರ್ಯಕ್ರಮದ ನಂತರ ಶ್ರೀ ಹುಕ್ಕೇರಿಮಠ ಅಕ್ಕನ ಬಳಗದ ಅಕ್ಕಂದಿರಿಂದ ಮತ್ತು ಸನ್ಮಾನಿತರಿಂದ ವಚನ ಸಂಗೀತ ಕಾರ್ಯಕ್ರಮ ಜರುಗಿತು. ಸಹ ಕಾರ್ಯದರ್ಶಿ ಮಮತಾ ಮಾಗಳ ಪ್ರಾರ್ಥನೆ ನಡೆಸಿಕೊಟ್ಟರು.

ಸಮಿತಿಯ ಕೋಶಾಧ್ಯಕ್ಷ ಫಕ್ಕೀರಶಟ್ರು ಎಸ್. ಅಂಗಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸುರೇಖಾ ಬ.ನೆರಳೆಕರ್ ಸ್ವಾಗತಿಸಿದರು. ಸೇವಾ ಸಮಿತಿಯ ಪ್ರಧಾನ ಕಾರ್ಯದರ್ಶಿ ಶಶಿಕಲಾ ಪಿ.ಅಕ್ಕಿ. ಕಾರ್ಯಕ್ರಮ ನಿರೂಪಿಸಿದರು. ರಶ್ಮಿ ಎನ್. ತುಪ್ಪದ ವಂದಿಸಿದರು.

ಸಂಸ್ಕೃತ ಶಿಕ್ಷಕ, ಪ್ರವಚನಕಾರ ಪ್ರಭುಲಿಂಗಯ್ಯ ಆರಾಧ್ಯಮಠ ಹತ್ತಿಮತ್ತೂರು ಮಾತನಾಡಿ, ಹಾನಗಲ್ಲಿನ ಕುಮಾರ ಶಿವಯೋಗಿ, ಕಾಡಶಟ್ಟಿಹಳ್ಳಿಯ ಗಾನಯೋಗಿ ಪಂಚಾಕ್ಷರಿ ಮತ್ತು ದೇವಗಿರಿಯ ಪಂ. ಪುಟ್ಟರಾಜರನ್ನು ಪಡೆದ ಹೆಮ್ಮೆ ಹಾವೇರಿ ಜಿಲ್ಲೆಗೆ ಇದೆ. ಈ ಗುರುತ್ರಯರ ಸೇವೆಗೆ ಸಲ್ಲಬೇಕಾದ ಗೌರವ ಸರಕಾರದಿಂದ ಸಲ್ಲಲಿ. ಈ ನಿಟ್ಟಿನಲ್ಲಿ ಸೇವಾ ಸಮಿತಿಯು ಕಾರ್ಯ ಪ್ರವೃತ್ತವಾಗಬೇಕು ಎಂದು ಹೇಳಿ, ಪಂಚಾಕ್ಷರಿ ಪುಟ್ಟರಾಜರ ಜೀವನ ಸಾಧನೆಯನ್ನು ಪರಿಚಯಿಸಿದರು.

# ಹೇಮರೆಡ್ಡಿ ಮಲ್ಲಮ್ಮ ಜಯಂತ್ಯುತ್ಸವ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಬಟ್ಟೂರ ಗ್ರಾಮದಲ್ಲಿ ಶನಿವಾರ ರೆಡ್ಡಿ ಸಮುದಾಯವರು ಗ್ರಾಮದ ಇತರೇ ಸಮಾಜದವರೊಡಗೂಡಿ ಹೇಮರೆಡ್ಡಿ ಮಲ್ಲಮ್ಮ ಜಯಂತ್ಯುತ್ಸವ ಆಚರಿಸಿದರು.

ಎತ್ತಿನ ಬಂಡಿ ಮೆರವಣಿಗೆಯಲ್ಲಿ ವಾದ್ಯಮೇಳ, ಮಹಿಳೆಯರ ಪೂರ್ಣಕುಂಭ ಆಚರಣೆಗೆ ಮೆರುಗು ತಂದಿತು. ಈ ವೇಳೆ ಮಾತನಾಡಿದ ಹಿರಿಯರಾದ ಬಸನಗೌಡ್ರ ಪಾಟೀಲ, ಮಹಾಶಿವಶರಣೆಯಾಗಿ ಬೆಳಗಿದ ಹೇಮರಡ್ಡಿ ಮಲ್ಲಮ್ಮ ಸ್ತ್ರೀಕುಲದ ಅನರ್ಘ್ಯರತ್ನವಾಗಿ ಮಲ್ಲಮ್ಮಳ ಹೆಸರು ಶಾಶ್ವತವಾಗಿರುತ್ತದೆ. ಅವಳ ಜೀವನಾದರ್ಶಗಳು ಸಮಾಜಕ್ಕೆ ದಾರಿದೀಪವಾಗಿದ್ದು, ಇಂತಹ ಶ್ರೇಷ್ಠ ಶಿವಶರಣೆ ಸದಾ ಸ್ಮರಣೀಯ ಎಂದರು.

ಈ ವೇಳೆ ಚಂದ್ರಶೇಖರಪ್ಪ ಕರಿನಾಗಣ್ಣವರ, ನಾಗಪ್ಪ ದಾನಿ, ಮಹಾದೇವಪ್ಪ ಉಡಚಗೊಂಡ, ಬಸವರಾಜ ಮೇಟಿ, ಸೋಮಪ್ಪ ಶಿರಹಟ್ಟಿ, ಗಿರೀಶ ಮೇಟಿ ಸೇರಿ ವಿವಿಧ ಸಮಾಜದ ಮುಖಂಡರು, ಮಹಿಳೆಯರು, ಮಕ್ಕಳು ಪಾಲ್ಗೊಂಡಿದ್ದರು.

# ಬೇಸಿಗೆ ಶಿಬಿರ ಕಲಿಕೆಗೆ ಸಹಕಾರಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಬೇಸಿಗೆ ಶಿಬಿರಗಳು ಮಕ್ಕಳ ಕಲಿಕೆಗೆ ಸಹಕಾರಿಯಾಗಿದೆ ಎಂದು ಬಾಲಲೀಲಾ ಮಾಹಾಂತ ಶಿವಯೋಗಿ ಶಿಕ್ಷಣ ಸಮಿತಿಯ ಅಧ್ಯಕ್ಷ ಎಂ.ಡಿ. ಬಟ್ಟೂರ ಹೇಳಿದರು.

ಅವರು ಪಟ್ಟಣದ ಬಿ.ಸಿ. ಬಂಗಾರಿ ಪೂರ್ವ ಪ್ರಾಥಮಿಕ ಹಾಗೂ ಪ್ರಾಥಮಿಕ ಶಾಲೆಯಲ್ಲಿ ಗದಗ ಐಕಾನ್ ಸಂಸ್ಥೆಯಿಂದ ಜರುಗಿದ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ಸೇವೆ ಸಲ್ಲಿಸಿದ ಶಿಕ್ಷಕ ವೃಂದದವರಿಗೆ ಸನ್ಮಾನಿಸಿ ಮಾತನಾಡಿದರು.

ಇಂದಿನ ಆಧುನಿಕ ಯುಗದಲ್ಲಿ ಶಿಕ್ಷಣಕ್ಕೆ ಮಹತ್ತರ ಸ್ಥಾನವಿದ್ದು, ಯಾರೂ ಶಿಕ್ಷಣದಿಂದ ವಂಚಿತರಾಗಬಾರದು. ಅದರಲ್ಲೂ ಬೇಸಿಗೆ ಸಮಯದಲ್ಲಿ ಮಕ್ಕಳು ಕಲಿಕೆಯಿಂದ ದೂರ ಉಳಿಯುವುದರಿಂದ ಮುಂದಿನ ಹಂತದ ತರಗತಿಗಳಲ್ಲಿ ಅಭ್ಯಸಿಸುವುದು ಕಷ್ಟಕರವಾಗುತ್ತದೆ. ಈ ಸಮಯದಲ್ಲಿ ಐಕಾನ್ ಸಂಸ್ಥೆಯ ನಾಗರಾಜ ಬಂಡಿ ಬೇಸಿಗೆ ಶಿಬಿರ ಹಮ್ಮಿಕೊಂಡು ಮಕ್ಕಳ ಕಲಿಕೆಗೆ ಸಹಕಾರಿಯಾಗಿದ್ದಾರೆ ಎಂದರು.

ಐಕಾನ್ ಸಂಸ್ಥೆಯ ನಾಗರಾಜ ಬಂಡಿ ಮಾತನಾಡಿ, ಪ್ರತಿಯೊಬ್ಬ ಮಗುವಿನಲ್ಲಿಯೂ ಪ್ರತಿಭೆ ಇರುತ್ತದೆ. ಅದಕ್ಕೆ ಶಿಕ್ಷಕರು, ಪಾಲಕರು, ಸಮಾಜ ಬೆನ್ನು ತಟ್ಟಿದಾಗ ಆ ಮಗು ನಾಡಿಗೆ ಬೆಳಕಾಗುತ್ತದೆ. ಮಕ್ಕಳ ಪ್ರತಿಭೆಗೆ ತಕ್ಕಂತೆ ಕಲಿಕೆಗೆ ಪ್ರೋತ್ಸಾಹಿಸುವುದರಿಂದ ಮಗುವಿನ ಬುದ್ಧಿಮತ್ತೆ ವೃದ್ಧಿಯಾಗುತ್ತದೆ ಎಂದರು.

ಬಿ.ಸಿ. ಬಂಗಾರಿ ಪ್ರಾಥಮಿಕ ಶಾಲೆಯ ಕಾರ್ಯದರ್ಶಿ ಪಿ.ಎ. ವಂಟಕರ, ಪ.ಪಂ ಸದಸ್ಯ ಎಸ್.ಸಿ. ಬಡ್ನಿ ಮಾತನಾಡಿದರು.

ಶಿಕ್ಷಕರಾದ ಉಮಾ ಬ್ಯಾಳಿ, ಜ್ಯೋತಿ ನೀಲಗುಂದ, ಶೀವು ಕೊಂಡಿಕೊಪ್ಪ, ದಾವಲಸಾಬ ಲಾಡಸಾಬನವರ, ಅರುಣ ಆವಿ, ನಿಶಾ ಲಾಡಸಾಬನವರ, ಅಂಜುಮಬಾನು ತಹಸೀಲ್ದಾರ, ಯಾಸೀನ ಕಮತಗಿ, ಈರಮ್ಮಾ ಹಡಪದ, ಶಿವಲೀಲಾ ಕೋರಿ. ಸುಮಾ ಪಾಟೀಲ್, ಪೂಜಾ ಮ್ಯಾಗೇರಿ, ನಿರ್ಮಲಾ ಜತ್ತಿ, ಲಕ್ಷ್ಮಿ, ಪಾಲಕರು, ವಿದ್ಯಾರ್ಥಿಗಳು ಇದ್ದರು.

# ಹೊಲಗಳಿಗೆ ರಸ್ತೆ ಸಂಪರ್ಕ ಕಲ್ಪಿಸಲು ಮನವಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಗೊಜನೂರ ಗ್ರಾಮದ ಸರಹದ್ದಿನಲ್ಲಿ ಬರುವ ಸುಮಾರು 300 ಎಕರೆಗೂ ಅಧಿಕ ರೈತರ ಜಮೀನುಗಳಿಗೆ ತಲುಪಲು ದಾರಿಯಿಲ್ಲದೆ ಕೃಷಿ ಚಟುವಟಿಕೆಗಳನ್ನು ಮಾಡುವದು ದುಸ್ತರವಾಗುತ್ತಿದ್ದು, ಅದಕ್ಕಾಗಿ ಈ ಭೂಮಿಗಳಿಗೆ ರಸ್ತೆ ಸಂಪರ್ಕ ಕಲ್ಪಿಸಿ ರೈತರಿಗೆ ಅನೂಕೂಲ ಮಾಡಿಕೊಡಬೇಕೆಂದು ಆಗ್ರಹಿಸಿ ರೈತರು ಸೋಮವಾರ ತಹಸೀಲ್ದಾರರಿಗೆ ಮನವಿ ಅರ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ರೈತರ ಮುಖಂಡ ಚನ್ನಪ್ಪ ಷಣ್ಮುಖಿ, ಬಹುವರ್ಷಗಳಿಂದ ಇಲ್ಲಿನ ರೈತರ ಜಮೀನುಗಳಿಗೆ ಹೋಗಲು ದಾರಿಯಿಲ್ಲದೆ ಅಂದಾಜು 69 ರೈತ ಕುಟುಂಬಗಳಿಗೆ ಬಿತ್ತನೆ ಹಾಗೂ ಬೇಸಾಯ ಮಾಡಲು ತೊಂದರೆ ಆಗುತ್ತಿದೆ. ಅವರಿಗೆ ಅನೂಕೂಲ ಒದಗಿಸಬೇಕು ಎಂದು ಆಗ್ರಹಿಸಿದರು.

ಗೊಜನೂರು ಗ್ರಾಮದ ರಿ.ಸ.ನಂ 24-29, 51-55 ಜಮೀನುಗಳ ರೈತರಿಗೆ ದಾರಿಯಿಲ್ಲದೆ ಅತಂತ್ರ ಪರಿಸ್ಥಿತಿ ನಿರ್ಮಾಣವಾಗಿದೆ. ನಿಗದಿತ ಸ್ಥಳಕ್ಕೆ ಶೀಘ್ರ ಭೇಟಿ ನೀಡಿ ಸಂಕಷ್ಟದಲ್ಲಿರುವ ರೈತರ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ವ್ಯವಸ್ಥೆ ಮಾಡಬೇಕು ಎಂದು ಮನವಿ ಮಾಡುವದಾಗಿ ಹೇಳಿದರು.

ಗ್ರೇಡ್ 2 ತಹಸೀಲ್ದಾರ ಮಂಜುನಾಥ ಅಮಾಸಿ ಮನವಿ ಸ್ವೀಕರಿಸಿ ಮೇಲಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ರಮೇಶ ಮುರಡಿ, ಮಂಜುನಾಥ ಸಂದಿಗೋಡ, ದಾದಾಸಾಬ್ ದೊಡ್ಡಮನಿ, ಜಗದೀಶ ಗುಂಜಳ, ಎಮ್.ಎಮ್. ಪರಸಣ್ಣನವರ, ಶೇಖರಪ್ಪ ಮುರಡಿ, ಈಶ್ವರಗೌಡ ಸಂದಿಗೋಡ, ಆರ್.ಜಿ. ಚಿಂಚಲಿ, ಪಿ.ಕೆ. ಸಂದಿಗೋಡ, ಎಮ್.ಎಮ್. ಶಿರಬಡಗಿ, ದೇವಪ್ಪ ನಿಟ್ಟೂರ, ಬಿ.ಸಿ. ಪರಸಣ್ಣನವರ ಸೇರಿದಂತೆ ಅನೇಕ ರೈತರು ಹಾಜರಿದ್ದರು.

### 'ಸಹಕಾರಿ ರಂಗದ ಭೀಷ್ಮ ಕೆ.ಎಚ್. ಪಾಟೀಲರು' ನಾಟಕ ವೀಕ್ಷಿಸಿದ ಕೃಷ್ಣಗೌಡ ಪಾಟೀಲ ಅಭಿಮತ

# ನಾಟಕ ಪ್ರೇಕ್ಷಕರನ್ನು ಭಾವುಕರನ್ನಾಗಿಸಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ದಿ. ಕೆ.ಎಚ್. ಪಾಟೀಲ ಅವರ ಜೀವನ ಚರಿತ್ರೆಯನ್ನು ನಾಟಕ ರೂಪದಲ್ಲಿ ಯಶಸ್ವಿಯಾಗಿ ಪ್ರದರ್ಶನ ಮಾಡುವ ಮೂಲಕ ಇಂದಿನ ಯುವ ಪೀಳಿಗೆಗೆ ಅವರ ಸಾಧನೆಗಳನ್ನು ಕಣ್ಮುಂದೆ ತೆರೆದಿಟ್ಟಿರುವುದು ಶ್ಲಾಘನೀಯವಾಗಿದೆ ಎಂದು ಯುವ ಮುಖಂಡ ಕೃಷ್ಣಗೌಡ ಎಚ್.ಪಾಟೀಲ ಹೇಳಿದರು.

ಅವರು ಹುಲಕೋಟಿಯ ಸ್ವಾಮಿ ವಿವೇಕಾನಂದ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಗದುಗಿನ ನಟರಂಗ ಕಲ್ಚರಲ್ ಅಕಾಡೆಮಿ ಮತ್ತು ಟ್ರಸ್ಟ್ ವತಿಯಿಂದ ಜರುಗಿದ ಮಕ್ಕಳ ಕಲರವ-2024 ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ಉಮೇಶ ಕಿನ್ನಾಳ ಅವರ ನಿರ್ದೇಶನದ 'ಸಹಕಾರಿ ರಂಗದ ಭೀಷ್ಮ ಕೆ.ಎಚ್. ಪಾಟೀಲರು' ಎಂಬ ಅವರ ಜೀವನ ಚರಿತ್ರೆ ಕುರಿತ ನಾಟಕವನ್ನು ವೀಕ್ಷಿಸಿದ ತರುವಾಯ ಮಾತನಾಡಿದರು.

ಇದಕ್ಕೂ ಮೊದಲು ಶಿಬಿರದ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಮತ್ತು ಪ್ರೀತಿ ಕಬಾಡರ ನಿರ್ದೇಶನದ 'ಹನುಮನ ಭಕ್ತಿ' ಹಾಗೂ ಉಮೇಶ ಕಿನ್ನಾಳ ನಿರ್ದೇಶನದ 'ಮೂರ್ಖರಾಜ' ನಾಟಕಗಳನ್ನು ಮನೋಜ್ಞವಾಗಿ ಪ್ರದರ್ಶಿಸಿದರು.




> ಈ ನಾಟಕದಲ್ಲಿ ಶಿಬಿರದ ಮಕ್ಕಳು ಅತ್ಯದ್ಭುತವಾಗಿನಟಿಸಿದ್ದಾರೆ.ನನ್ನಅಜ್ಜನವರಾದ ದಿ. ಕೆ.ಎಚ್. ಪಾಟೀಲ ಅವರ ಹೋರಾಟ, ಬಡವರ ಹಾಗೂ ರೈತರ ಬಗ್ಗೆ ಅವರಿಗಿದ್ದ ಕಾಳಜಿಯನ್ನುಮತ್ತುಅವರಜೀವನದಅಂತಿಮ ಕ್ಷಣಗಳನ್ನು ಎಳೆ-ಎಳೆಯಾಗಿ ಬಿಚ್ಚಿದ್ದಾರೆ. ಈ ನಾಟಕನಿಜಕ್ಕೂಎಲ್ಲರನ್ನುಭಾವುಕರನ್ನಾಗಿಸಿತು. ಇಂತಹ ಸಾಂಸ್ಕೃತಿಕ ಶಿಬಿರಗಳು ನಿರಂತರವಾಗಿ ನಡೆಯಲು ಹುಲಕೋಟಿ ಗ್ರಾಮದ ಹಿರಿಯರ ಸಹಾಯ, ಸಹಕಾರ ಸದಾ ಇರುತ್ತದೆ.
>
> – ಕೃಷ್ಣಗೌಡ ಎಚ್.ಪಾಟೀಲ.
> ಯುವ ಮುಖಂಡರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರುಗಳಾದ ಜಿಮ್ಸ್‌ನ ಡಾ. ರಾಜಶೇಖರ ಮ್ಯಾಗೇರಿ, ಡಾ. ಜಿತೇಂದ್ರ ಮುಗಳಿ, ಯುವ ಮುಖಂಡರುಗಳಾದ ಶಿವಪ್ಪ ಬಳ್ಳಾರಿ, ನವೀನ ಬಂಡಾರಿ, ಸಮಾಜಸೇವಕಿ ಜಾನಕಿ ಚಿಕ್ಕನಗೌಡರ, ಪತ್ರಕರ್ತ ವೆಂಕಟೇಶ ಇಮರಾಪೂರ ಅವರನ್ನು ಸನ್ಮಾನಿಸಲಾಯಿತು. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕಗಳಿಸಿದ ವಿದ್ಯಾರ್ಥಿಗಳನ್ನು ಮತ್ತು ಶಿಬಿರದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ನೀಡಿ ಗೌರವಿಸಲಾಯಿತು.

ವೇದಿಕೆ ಮೇಲೆ ಕೆ.ಎಚ್. ಪಾಟೀಲ ವಿದ್ಯಾಮಂದಿರದ ಅಧ್ಯಕ್ಷ ಎಂ.ಆರ್. ಪಾಟೀಲ, ಕೆ.ಎಚ್. ಪಾಟೀಲ ಗ್ರಾಮ ಹಿತಾಭಿವೃದ್ಧಿ ಸಂಘದ ಅಧ್ಯಕ್ಷ ಪಿ.ಕೆ. ಪಾಟೀಲ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಸಿ.ಬಿ. ಕರಕಟ್ಟಿ, ತಾ.ಪಂ ಮಾಜಿ ಉಪಾಧ್ಯಕ್ಷ ಮೋಹನ ದುರಗಣ್ಣವರ, ತಾ.ಪಂ ಇಓ ಡಾ. ಎಚ್.ಎಸ್. ಜಿನಗಾ, ಅಪ್ಪುರಾಜ ಇವೆಂಟ್ಸ್‌ನ ಅಪ್ಪುರಾಜ ಭದ್ರಕಾಳಮ್ಮನಮಠ, ನಗರಸಭೆ ಸದಸ್ಯೆ ಲಕ್ಷ್ಮೀ ಸಿದ್ದಮ್ಮನಹಳ್ಳಿ, ಯುವ ಮುಖಂಡ ಇರ್ಫಾನ್ ಡಂಬಳ, ನಟರಂಗ ಕಲ್ಚರಲ್ ಅಕಾಡೆಮಿ ಮತ್ತು ಟ್ರಸ್ಟ್‌ನ ಅಧ್ಯಕ್ಷ ಸೋಮಶೇಖರಯ್ಯ ಚಿಕ್ಕಮಠ ಮುಂತಾದವರು ಉಪಸ್ಥಿತರಿದ್ದರು.

ನಟರಂಗ ಕಲ್ಚರಲ್ ಅಕಾಡೆಮಿ ಮತ್ತು ಟ್ರಸ್ಟ್‌ನ ಕಾರ್ಯದರ್ಶಿ ಹಾಗೂ ಝೀ ಟಿವಿಯ ಮುಖ್ಯಸ್ಥರಾದ ಮೋಹನಕುಮಾರ ಕಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು.

### ರೋಟರಿ ಸಂಸ್ಥೆಯ ಸಾಪ್ತಾಹಿಕ ಸಭೆಯಲ್ಲಿ ರೊ. ಶ್ರೀಧರ ಸುಲ್ತಾನಪುರ

# ಇ-ತ್ಯಾಜ್ಯವನ್ನು ಸೂಕ್ತವಾಗಿ ವಿಲೇವಾರಿ ಮಾಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಇ-ತ್ಯಾಜ್ಯ ನಮ್ಮ ಪರಿಸರವನ್ನು ಕಲುಷಿತಗೊಳಿಸುತ್ತಿದೆ. ಆದ್ದರಿಂದ, ಪ್ರತಿಯೊಬ್ಬರೂ ಇ-ತ್ಯಾಜ್ಯವನ್ನು ಸರಿಯಾದ ರೀತಿಯಲ್ಲಿ ವಿಲೇವಾರಿ ಮಾಡಬೇಕೆಂದು ರೋಟರಿ ವೆಲ್‌ಫೇರ್ ಸೊಸೈಟಿಯ ಅಧ್ಯಕ್ಷ ಶ್ರೀಧರ ಸುಲ್ತಾನಪುರ ತಿಳಿಸಿದರು.

ರೋಟರಿ ಸಂಸ್ಥೆ ಗದಗ-ಬೆಟಗೇರಿಯ ಸಾಪ್ತಾಹಿಕ ಸಭೆಯಲ್ಲಿ ಎಲೆಕ್ಟ್ರಾನಿಕ್ಸ ತ್ಯಾಜ್ಯ ವಿಷಯದ ಕುರಿತು ಮಾತನಾಡಿದ ಅವರು, ಭಾರತ ದೇಶವು ಪ್ರತಿ ವರ್ಷ ಸುಮಾರು 1.6 ಮೆಟ್ರಿಕ್ ಟನ್ ಎಲೆಕ್ಟ್ರಾನಿಕ ತ್ಯಾಜ್ಯನ್ನು ಸೃಷ್ಟಿಸುತ್ತದೆ. ಇವುಗಳನ್ನು ಸೂಕ್ತವಾಗಿ ವಿಲೇವಾರಿ ಮಾಡುವುದ ಅವಶ್ಯಕವಾಗಿದೆ. ಕಳೆದ ಕೆಲವು ವರ್ಷಗಳಲ್ಲಿ ನಗರದಲ್ಲಿ ಇ-ತ್ಯಾಜ್ಯ ಉತ್ಪಾದನೆಯಲ್ಲಿ ಭಾರೀ ಹೆಚ್ಚಳವಾಗಿದೆ ಎಂದು ಹಲವಾರು ಅಧ್ಯಯನಗಳು ಸೂಚಿಸಿವೆ. ಇದರಿಂದ ನಮ್ಮ ಸುತ್ತಮುತ್ತಲಿನ ಪರಿಸರವು ಕಲುಷಿತಗೊಳ್ಳುತ್ತಿದ್ದು, ಅನೇಕ ರೋಗಗಳಿಗೆ ಕಾರಣವಾಗಬಹುದು. ಆದ್ದರಿಂದ ಸಾರ್ವಜನಿಕರು ಹಾಗೂ ಕಸ ವಿಲೇವಾರಿ ಮಾಡುವ ಸಂಸ್ಥೆಗಳು ಅವುಗಳನ್ನು ಸರಿಯಾಗಿ ವಿಲೇವಾರಿ ಮಾಡಿ ಪರಸರನ್ನು ರಕ್ಷಿಸಬೇಕು ಎಂದರು.




ರೋಟರಿ ಸಂಸ್ಥೆಯ ಅಧ್ಯಕ್ಷ ರೊ. ಚಂದ್ರಮೌಳಿ ಜಾಲಿ ಸ್ವಾಗತಿದರು. ಸಂಸ್ಥೆಯ ಕಾರ್ಯದರ್ಶಿ ವೀಣಾ ತಿರ್ಲಾಪೂರ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ರೋಟರಿ ಸಂಸ್ಥೆ ಗದಗ-ಬೆಟಗೇರಿಯ ಸದಸ್ಯರಾದ ರೊ. ಶಿವಾಚಾರ್ಯ ಹೊಸಳ್ಳಿಮಠ, ರೊ. ಇಂ. ಮಹಾಂತೇಶ ಬಾತಾಖಾನಿ, ರೊ. ಹೆಚ್.ಎಸ್. ಪಾಟೀಲ, ರೊ. ವಿಶ್ವನಾಥ ಯಳಮಲಿ, ರೊ. ಡಾ. ರಾಜಶೇಖರ ಬಳ್ಳಾರಿ, ರೊ. ಡಾ. ಪ್ರದೀಪ ಉಗಲಾಟ, ರೊ. ಕೊಟ್ರೇಶ ಹಿರೇಗೌಡರ, ರೊ.ಡಾ. ಕಮಲಾಕ್ಷಿ ಅಂಗಡಿ, ರೊ. ಅಕ್ಷಯ ಶೆಟ್ಟಿ, ರೊ. ಸಂತೋಷ ಅಕ್ಕಿ, ರೊ.ಡಾ. ಆರ್.ಬಿ. ಉಪ್ಪಿನ ಮುಂತಾದವರು ಉಪಸ್ಥಿತರಿದ್ದರು. ಕಾರ್ಯದರ್ಶಿ ವೀಣಾ ತಿರ್ಲಾಪೂರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.



ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಅವರ ನೇತೃತ್ವದಲ್ಲಿ ಇತ್ತೀಚೆಗೆ ದಾಂಡೇಲಿಯಲ್ಲಿ ನಡೆದ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಕಾರ್ಯಕಾರಿ ಮಹಾಸಭೆಯಲ್ಲಿ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ರವಿ ಗುಂಜೀಕರ, ಗದಗ ಜಿಲ್ಲಾ ಸರಕಾರಿ ನೌಕರರ ಸಂಘದ ಗೌರವ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಮಲ್ಲಿಕಾರ್ಜುನ ಹನಸಿ ಸೇರಿದಂತೆ ಸಂಘದ ಪದಾಧಿಕಾರಿಗಳು ಭಾಗವಹಿಸಿದ್ದರು.

### 58ನೇ ವರ್ಷದ ಉಚಿತ ಅಸ್ತಮಾ ವಿತರಣಾ ಕಾರ್ಯಕ್ರಮದ ಪೂರ್ವಭಾವಿ ಸಭೆ

# ಉಚಿತ ಔಷಧಿ ವಿತರಣೆ ಜೂನ್ 8ಕ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಕಳೆದ 57 ವರ್ಷಗಳಿಂದ ಅಸ್ತಮಾ ರೋಗಿಗಳಿಗೆ ಉಚಿತವಾಗಿ ಮಂತ್ರೌಷಧಿಯನ್ನು ವಿತರಿಸುವ ಮೂಲಕ ಲಕ್ಷ್ಮೇಶ್ವರದ ಹೆಸರಿನ ಕೀರ್ತಿಯನ್ನು ದೇಶದ ಉದ್ದಗಲಕ್ಕೂ ಹಬ್ಬುವಂತೆ ಮಾಡಿದ್ದ ದಿ. ಡಾ.ವೈದ್ಯಬಾಬುರಾವ್ ಕುಲಕರ್ಣಿ ಇವರ ಸೇವೆ ಅಪಾರವಾಗಿದ್ದು, ಅವರು ಹಾಕಿಕೊಟ್ಟ ಮಾರ್ಗದಲ್ಲಿ ಈ ಉಚಿತ ಔಷಧಿ ವಿತರಣೆ ಕಾರ್ಯಕ್ರಮವನ್ನು ನಡೆಸಿಕೊಂಡು ಹೋಗಲಾಗುತ್ತಿದ್ದು, ಈ ವರ್ಷದ ಔಷಧಿಗಾಗಿ ಬರುವ ಜನರಿಗೆ ಇಲ್ಲಿ ಅವಶ್ಯವಿರುವ ವ್ಯವಸ್ಥೆಯನ್ನು ಮಾಡುವ ಮೂಲಕ ಎಲ್ಲರೂ ಯಶಸ್ವಿಗೊಳಿಸಬೇಕು ಎಂದು ಹಿರಿಯ ಮುಖಂಡ ಗೋಪಾಲ ಪಡ್ನೀಸ್ ಹೇಳಿದರು.

ಅವರು ದಿ. ವೈದ್ಯ ಬಾಬುರಾವ್ ಕುಲಕರ್ಣಿಯವರ ನಿವಾಸದಲ್ಲಿ 58ನೇ ವರ್ಷದ ಉಚಿತ ಅಸ್ತಮಾ ವಿತರಣಾ ಕಾರ್ಯಕ್ರಮದ ಅಂಗವಾಗಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡುತ್ತಿದ್ದರು.



ಈ ಬಾರಿ ಜೂನ್ 8ರಂದು ಮುಂಜಾನೆ 7.11ಕ್ಕೆ ಮೃಗಶಿರಾ ಮಳೆಯ ಪ್ರವೇಶ ಕಾಲದಲ್ಲಿ ಡಾ.ಹರೀಶ ಕುಲಕರ್ಣಿ ಅವರ ನೇತೃತ್ವದಲ್ಲಿ ಅಸ್ತಮಾ ಔಷದಿಯನ್ನು ಬೆಳ್ಳಟ್ಟಿ ರಾಮಲಿಂಗೇಶ್ವರಮಠದ ಶ್ರೀ ಬಸವರಾಜ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ಉಚಿತವಾಗಿ ವಿತರಿಸಲಾಗುವದು. ಲಕ್ಷ್ಮೇಶ್ವರ ಸರಕಾರಿ ಪ್ರಾಥಮಿಕ ಶಾಲೆಯ ನಂ.1ರ ಆವರಣದಲ್ಲಿ ಅಸ್ತಮಾ ಯಜ್ಞ ನಡೆಯಲಿದ್ದು, ಆಗಮಿಸುವ ರೋಗಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ನೋಡಿಕೊಳ್ಳುವದು ಎಲ್ಲರ ಕರ್ತವ್ಯವಾಗಿದೆ. ಕಾರ್ಯಕ್ರಮವನ್ನು ಸೇವೆಯ ರೂಪದಲ್ಲಿ ಯಶಸ್ವಿಗೊಳಿಸಬೇಕಾಗಿದೆ ಎಂದು ಹೇಳಿದರು.

ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ಪಲ್ಲಣ್ಣನವರು ಕುಲಕರ್ಣಿ ವಹಿಸಿದ್ದರು. ಕೃಷ್ಣ ಕುಲಕರ್ಣಿ, ಅನಿಲ ಕುಲಕರ್ಣಿ, ಡಾ. ಹರೀಶ ಕುಲಕರ್ಣಿ, ನಿಂಗಪ್ಪ ತಹಸೀಲ್ದಾರ, ನಿಂಗಪ್ಪ ಗೊರವರ, ಪಾಪಣ್ಣ ಬನ್ನಿ, ಪುಟ್ಟಪ್ಪ ಕೋರಿ, ಬಸಪ್ಪ ನೀಲಪ್ಪನವರ, ನೀಲಪ್ಪ ಬಾಳೆಹೊಸೂರು, ಫಕ್ಕೀರೇಶ, ಗಂಗಾಧರ, ಮುದಕಪ್ಪ ಬನ್ನಿ, ಯಲ್ಲಪ್ಪ ಬನ್ನಿ, ನಿಂಗಪ್ಪ ಕಲ್ಯಾಣಿ ಸೇರಿದಂತೆ ಅನೇಕರಿದ್ದರು.

> ವಿರುಪಾಕ್ಷಪ್ಪ ಪಡಗೇರಿ ಮತ್ತು ಎಂ.ಆರ್. ಪಾಟೀಲ ಮಾತನಾಡಿ, ಇಂತಹದೊಂದು ಮಹತ್ವದ ಕಾರ್ಯ ಜರುಗಬೇಕಾದರೆ ಸಮಾಜದ ಸಹಕಾರ ಅತಿ ಮುಖ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ಬರುವ ಜನರಿಗೆ ಉತ್ತಮವಾಗಿ ವ್ಯವಸ್ಥೆ ಮಾಡುವದಕ್ಕೆ ಇಲ್ಲಿನ ಹಾಲಮತ ಸಮಾಜ ಬಾಂಧವರು ಅನೇಕ ಸಂಘ-ಸಂಸ್ಥೆಗಳು, ಯುವಕರು ಶ್ರಮಿಸುತ್ತಿದ್ದು, ಪುರಸಭೆಯಿಂದ ಅವಶ್ಯಕ ಸೇವೆಗಳನ್ನು ದೊರಕಿಸುವದು, ಬಂದ ಜನರಿಗೆ ಸರಿಯಾಗಿ ಔಷಧಿ ದೊರೆಯುವಂತೆ ಶಿಸ್ತಿನಿಂದ ವ್ಯವಸ್ಥೆ ಮಾಡಿಸುವ ನಿಟ್ಟಿನಲ್ಲಿ ಕೆಲಸ ಮಾಡುವದಾಗಿ ಹೇಳಿದರು.

### ಜವಾಹರಲಾಲ ನೆಹರು ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಶಿವಾನಂದ ಗುಗ್ಗರಿ

# ನೆಹರು ನವ್ಯ ಭಾರತದ ಕನಸುಗಾರ

■ವಿಜಯಸಾಕ್ಷಿ ಸುದ್ದಿ, ನರೇಗಲ್

ಸ್ವಾತಂತ್ರ್ಯ ಭಾರತ ಹೇಗಿರಬೇಕು ಎಂಬ ಕನಸನ್ನು ಕಂಡು, ಅದನ್ನು ನನಸು ಮಾಡಲು ಶ್ರಮಿಸಿದವರು ಭಾರತದ ಮೊದಲ ಪ್ರಧಾನಿ ಜವಾಹರಲಾಲ ನೆಹರೂರವರು. ಆದ್ದರಿಂದ ಅವರನ್ನು ನವ್ಯ ಭಾರತದ ಕನಸುಗಾರ ಎಂದು ಕರೆಯಲಾಗುತ್ತದೆ ಎಂದು ಶಿವಾನಂದ ಗುಗ್ಗರಿ ಹೇಳಿದರು.

ಸಮೀಪದ ಅಬ್ಬಿಗೇರಿ ಗ್ರಾಮದ ಕಾಂಗ್ರೆಸ್ ಕಮಿಟಿಯ ಆಶ್ರಯದಲ್ಲಿ ಶ್ರೀ ವಿರುಪಾಕ್ಷೇಶ್ವರ ದೇವಸ್ಥಾನದಲ್ಲಿ ಆಚರಿಸಲಾದ ಜವಾಹರಲಾಲ ನೆಹರೂ ಅವರ 61ನೇ ಪುಣ್ಯ ಸ್ಮರಣೆಯಲ್ಲಿ ಅವರು ಮಾತನಾಡಿದರು.

ಭಾರತವನ್ನು ಸ್ವಾವಲಂಬಿ ರಾಷ್ಟ್ರವನ್ನಾಗಿಸುವುದು ಅವರ ಮೊದಲ ಕನಸಾಗಿತ್ತು. ಆಧುನಿಕ ಕೈಗಾರಿಕೆಗಳ ಸ್ಥಾಪನೆಗೆ ಅವರು ಮುಂದಾಗಿದ್ದು ಇದೇ ಕಾರಣಕ್ಕೆ. ಮಂದಿರ, ಮಸೀದಿ, ಚರ್ಚುಗಳ ನಿರ್ಮಾಣದಿಂದ ಭಾರತೀಯರ ಭವಿಷ್ಯ ನಿರ್ಮಾಣವಾಗುವುದಿಲ್ಲ, ಬದಲಾಗಿ ದುಡಿಯುವ ಕೈಗಳಿಗೆ ಕೆಲಸ ಕೊಟ್ಟರೆ ಅವರು ತಮ್ಮ ಅನ್ನವನ್ನು ತಾವು ಸಂಪಾದಿಸಿಕೊಳ್ಳುತ್ತಾರೆ. ಇದರಿಂದ ಭಾರತ ಆರ್ಥಿಕವಾಗಿ ಸ್ವಾತಂತ್ರ್ಯವಾಗುತ್ತದೆ ಎಂದು ನೆಹರು ಬಲವಾಗಿ ನಂಬಿದ್ದರು. ಭಾರತವನ್ನು ಶಕ್ತಿಶಾಲಿ ರಾಷ್ಟ್ರವನ್ನಾಗಿ ಮಾಡುವುದರ ಜೊತೆಗೆ ಜ್ಞಾನ ಮತ್ತು ಮಿಲಿಟರಿ ಶಕ್ತಿಯ ಭಾರತವನ್ನಾಗಿ ನಿರ್ಮಿಸಲು ಅವರು ಕನಸು ಕಂಡಿದ್ದರು ಎಂದು ಹೇಳಿದರು.



ಶಂಭುಶಾಸ್ತ್ರಿ ಮಾಳಶೆಟ್ಟಿ ನೇತೃತ್ವ ವಹಿಸಿದ್ದರು. ಸುರೇಶ ಬಸವರಡ್ಡೇರ, ಬಸವರಾಜ ಪಲ್ಲೇದ, ಸುರೇಶ ಶಿರೋಳ, ಜಗದೀಶ ಅವರೆಡ್ಡಿ, ಮಲ್ಲಣ್ಣ ಬಸವರಡ್ಡೇರ, ಗುರಣ್ಣ ಅವರೆಡ್ಡಿ, ಹನುಮಂತಪ್ಪ ದ್ವಾಸಲ, ದೇವಣ್ಣ ಅಸುಂಡಿ, ಎಂ.ಡಿ. ಬಸವರಡ್ಡೇರ, ಶಿವಪುತ್ರಪ್ಪ ತಿಪ್ಪಶೆಟ್ಟಿ, ದುರುಗೇಶ ಬಂಡಿವಡ್ಡರ, ಬಾಬು ಬನ್ನಿಕೊಪ್ಪ, ಚನ್ನಬಸು ಹೂಗಾರ, ಬಸವರಾಜ ಗುಗ್ಗರಿ, ಶಿವಪುತ್ರಪ್ಪ ಕೆಂಗಾರ, ಲಕ್ಷ್ಮಣ ಹಿರೇಮನಿ, ಶರಣಪ್ಪಗೌಡ ಮಾದಿನೂರ, ಸೋಮು ಶಿರೋಳ, ಕುಮಾರ ಬಸವರಡ್ಡೇರ, ಅಂದಪ್ಪ ದ್ವಾಸಲ, ಗುರುಲಿಂಗಪ್ಪ ಬಸವರಡ್ಡೇರ, ಮಹಾಂತೇಶ ಇಮ್ರಾಪೂರ, ಮುತ್ತಪ್ಪ ಕೆಂಗಾರ, ರಡ್ಡೆಪ್ಪ ದ್ವಾಸಲ ಮುಂತಾದವರು ಉಪಸ್ಥಿತರಿದ್ದರು.

> ಎ.ಎಚ್. ಖಾದ್ರಿ ಮಾತನಾಡಿ, 16 ವರ್ಷಗಳ ಕಾಲ ದೇಶದ ಪ್ರಧಾನಿಯಾಗಿದ್ದ ನೆಹರೂ ಅವರು ಭಾರತವನ್ನು ಸಶಕ್ತ ರಾಷ್ಟ್ರವನ್ನಾಗಿಸುವಲ್ಲಿ ಅನೇಕ ಯೋಜನೆಗಳನ್ನು ಜಾರಿಗೆ ತಂದರು. ವಿಜ್ಞಾನ ಮತ್ತು ತಂತ್ರಜ್ಞಾನಗಳು ಮಾತ್ರ ಭವ್ಯ ಭಾರತದ ಅಭಿವೃದ್ಧಿಗೆ ಸಹಕಾರಿಯಾಗಬಲ್ಲವು ಎಂಬುದನ್ನು ಮನಗಂಡಿದ್ದ ನೆಹರು, ಆ ದಿಶೆಯಲ್ಲಿಯೂ ಬಹಳಷ್ಟು ಪ್ರಯತ್ನಗಳನ್ನು ಮಾಡಿ ಅದರಲ್ಲಿ ಯಶಸ್ವಿಯೂ ಆದರು. ಮಹಾನ್ ಮಾನವತಾವಾದಿಯಾಗಿ, ಜಗತ್ತಿನ ಮಹತ್ವದ ನಾಯಕರಾಗಿ ನೆಹರು ಬೆಳೆದರು ಎಂದು ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka